ಸಂಪುಟ: 11 ಸಂಚಿಕೆ: 200 ಪುಟಗಳು: 4+2 ಬೆಲೆ: ₹ 3.00 ಭಾನುವಾರ, ಸೆಪ್ಟೆಂಬರ್ 13, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 200 Pages : 4+2 Rate : 3.00 Sunday, September 13, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## 380 ಅರ್ಜಿಗಳ ತ್ವರಿತ ವಿಲೇವಾರಿಗೆ ಶಾಸಕ ಎಚ್.ಕೆ. ಪಾಟೀಲ ಸೂಚನೆ


# ಮೂರು ದಿನದಲ್ಲಿ ಮನೆ ಹಕ್ಕುಪತ್ರ ನೀಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜನತಾ ದರ್ಶನದ ಮಾದರಿಯಲ್ಲಿ ಪ್ರಜಾ ಸೇವಾ ಅಭಿಯಾನವನ್ನೂ ಯಶಸ್ವಿಗೊಳಿಸಿ, ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಶಾಸಕ ಡಾ. ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗದಗ-ಬೆಟಗೇರಿ ಪಾಲಾ-ಬಾದಾಮಿ ರಸ್ತೆಯ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ ತಾರಾಲಯದ ಆವರಣದಲ್ಲಿ ಶನಿವಾರ ಪ್ರಜಾ ಸೇವಾ ಇಲಾಖೆಯಿಂದ 'ಬಾಗಿಲಿಗೆ ಬಂತು ಸರ್ಕಾರ-ಸೇವೆಗೆ ಇರಲಿ ಸಹಕಾರ' ಆಶಯದಡಿ ಆಯೋಜಿಸಿದ್ದ ಹೋಬಳಿ ಮಟ್ಟದ ಪ್ರಜಾ ಸೇವಾ ಅಭಿಯಾನ ಜನ ಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರ ಬಳಿಗೆ ತೆರಳಿ ಸಮಸ್ಯೆ ಆಲಿಸುವುದು, ಅರ್ಜಿ ಸ್ವೀಕರಿಸಿ ಸಂಬಂಧಿಸಿದ ಇಲಾಖೆಗಳ ಮೂಲಕ ಪರಿಹಾರ ಕಲ್ಪಿಸುವುದು ಅಭಿಯಾನದ ಉದ್ದೇಶ. ಜನರು ಕಚೇರಿಯಿಂದ ಕಚೇರಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಸ್ವೀಕರಿಸಿದ ಅರ್ಜಿಗಳ ವಾಸ್ತವಾಂಶ ಪರಿಶೀಲಿಸಿ ನಿಯಮಾನುಸಾರ ತ್ವರಿತವಾಗಿ ವಿಲೇವಾರಿ ಮಾಡಬೇಕು ಎಂದರು.




ಅಭಿಯಾನಕ್ಕೆ ಉತ್ತಮ ಸ್ಪಂದನೆ ದೊರೆತಿದ್ದು, ಮಧ್ಯಾಹ್ನ 12 ಗಂಟೆಯೊಳಗೆ 205 ಹಾಗೂ ನಂತರ ಸೇರಿದಂತೆ ಒಟ್ಟು 445 ಅರ್ಜಿಗಳು ಸ್ವೀಕೃತವಾಗಿವೆ. ಈ ಪೈಕಿ 380 ಅರ್ಜಿಗಳು ಮನೆಗಾಗಿ ಸಲ್ಲಿಕೆಯಾಗಿರುವುದು ಗಮನಾರ್ಹ. ಅರ್ಹ ಕುಟುಂಬಗಳಿಗೆ ವಿವಿಧ ವಸತಿ ಯೋಜನೆಗಳಡಿ ಸೌಲಭ್ಯ ಕಲ್ಪಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಮನೆಗಾಗಿ ಬಂದ 380 ಅರ್ಜಿಗಳನ್ನು ವಿಳಂಬವಿಲ್ಲದೆ ಪರಿಶೀಲಿಸಿ, ಅರ್ಜಿದಾರರ ಅರ್ಹತೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅರ್ಹರಿಗೆ ಮೂರು ದಿನಗಳೊಳಗಾಗಿ ಕಾನೂನುಬದ್ಧವಾಗಿ ಹಕ್ಕುಪತ್ರ ನೀಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಕಟ್ಟುನಿಟ್ಟಾಗಿ ಹೇಳಿದರು.

> ಪ್ರಜಾ ಸೇವಾ ಅಭಿಯಾನ ಕೇವಲ ಅರ್ಜಿ ಸ್ವೀಕರಿಸುವ ಕಾರ್ಯಕ್ರಮವಾಗ ಬಾರದು. ಅರ್ಹರಿಗೆ ಸರ್ಕಾರದ ಸೇವೆ ತಲುಪುವವರೆಗೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.ಜನರು ಮತ್ತು ಅಧಿಕಾರಿಗಳ ಸಹಕಾರ ದಿಂದಲೇ ಅಭಿಯಾನ ಯಶಸ್ವಿಯಾಗಲಿದೆ.
>
> **– ಡಾ. ಎಚ್.ಕೆ. ಪಾಟೀಲ, ಶಾಸಕ**

ಗದಗ ಜಿಲ್ಲೆಯಲ್ಲಿ ಮನೆ ಹಾಗೂ ಹಕ್ಕುಪತ್ರಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಬರುತ್ತಿರುವ ಹಿನ್ನೆಲೆಯಲ್ಲಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಲಾಗುವುದು. ಮುಂದಿನ ಕ್ರಮಗಳ ಕುರಿತು ಸಾರ್ವಜನಿಕರಿಗೆ ಪತ್ರದ ಮೂಲಕ ಮಾಹಿತಿ ನೀಡಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪ ವಿಭಾಗಾಧಿಕಾರಿ ಗಂಗಪ್ಪ ಎಂ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಜನತಾ ದರ್ಶನ ಮಾದರಿಯಲ್ಲಿ ಕಾರ್ಯ

ಜಿಲ್ಲೆಯಲ್ಲಿ ನಾಲ್ಕು ಬಾರಿ ನಡೆದ ಜನತಾ ದರ್ಶನಗಳಲ್ಲಿ 2,987ಕ್ಕೂ ಹೆಚ್ಚು ಅರ್ಜಿಗಳು ಸ್ವೀಕೃತವಾಗಿದ್ದು, ಬಹುತೇಕ ಅರ್ಜಿಗಳು ವಿಲೇವಾರಿಯಾಗಿವೆ. ಸದ್ಯ 147 ಅರ್ಜಿಗಳು ಮಾತ್ರ ಬಾಕಿ ಉಳಿದಿವೆ ಎಂದು ಶಾಸಕ ಎಚ್.ಕೆ. ಪಾಟೀಲ ತಿಳಿಸಿದರು. ಇದೇ ಮಾದರಿಯಲ್ಲಿ ಪ್ರಜಾ ಸೇವಾ ಅಭಿಯಾನದಲ್ಲೂ ಅರ್ಜಿಗಳ ವಿಲೇವಾರಿ ಮಾತ್ರವಲ್ಲದೆ, ಅರ್ಜಿದಾರರಿಗೆ ಮಾಹಿತಿ ನೀಡುವ ಹಾಗೂ ಸೇವೆ ದೊರೆಯುವವರೆಗೆ ಮೇಲ್ವಿಚಾರಣೆ ನಡೆಸುವಂತೆ ಸೂಚಿಸಿದರು.

## ಕಾಂಗ್ರೆಸ್ ಸಂಘಟನೆಗೆ ಹೊಸ ಬಲ: ಗುರುನಾಥ ದಾನಪ್ಪನವರ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಾಂಗ್ರೆಸ್ ಪಕ್ಷದ ನೂತನ ಗದಗ ಜಿಲ್ಲಾ ಅಧ್ಯಕ್ಷರಾಗಿ ನೇಮಕಗೊಂಡಿರುವ ಹಿರಿಯ ನಾಯಕ ವಾಸಣ್ಣ ಕುರಡಗಿ ಅವರು ಸುದೀರ್ಘ ರಾಜಕೀಯ ಅನುಭವ ಹಾಗೂ ಉತ್ತಮ ಸಂಘಟನಾ ಸಾಮರ್ಥ್ಯ ಹೊಂದಿದ್ದಾರೆ ಎಂದು ಶಿರಹಟ್ಟಿ ಮತಕ್ಷೇತ್ರದ ಕಾಂಗ್ರೆಸ್ ಮುಖಂಡ ಗುರುನಾಥ ದಾನಪ್ಪನವರ ಹೇಳಿದರು.

ಗದಗ ಪ್ರವಾಸಿ ಮಂದಿರದಲ್ಲಿ ವಾಸಣ್ಣ ಕುರಡಗಿ ಅವರನ್ನು ಸನ್ಮಾನಿಸಿ ಮಾತನಾಡಿದ ಅವರು, ಪಕ್ಷದ ತತ್ವ-ಸಿದ್ಧಾಂತಗಳಿಗೆ ಬದ್ಧರಾಗಿ ಹಲವು ವರ್ಷಗಳಿಂದ ಸಂಘಟನೆಗೆ ಕೊಡುಗೆ ನೀಡಿರುವ ವಾಸಣ್ಣ ಅವರು ಕಾರ್ಯಕರ್ತರೊಂದಿಗೆ ಆತ್ಮೀಯವಾಗಿ ಬೆರೆಯುವ ಸರಳ ವ್ಯಕ್ತಿತ್ವ ಹೊಂದಿದ್ದಾರೆ. ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷವನ್ನು ಮುನ್ನಡೆಸುವ ಸಾಮರ್ಥ್ಯ ಅವರಲ್ಲಿದ್ದು, ಅವರ ಅನುಭವ ಜಿಲ್ಲೆಯಲ್ಲಿ ಕಾಂಗ್ರೆಸ್ ಸಂಘಟನೆಗೆ ಹೊಸ ಬಲ ನೀಡಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಫಕ್ಕಿರೇಶ ಮ್ಯಾಟಣ್ಣವರ, ತಿಪ್ಪಣ್ಣ ಸಂಶಿ, ರಾಜಣ್ಣ ಮಡಿವಾಳರ, ಫಕ್ಕಿರೇಶ ನಡವಿನಕೇರಿ, ಜಗದೀಶ ಹುಲಿಗೆಮ್ಮನವರ, ಪವನ ಈಳಗೇರ, ಮಾರ್ತಾಂಡಪ್ಪ, ಹನಮಂತ ದೊಡ್ಡಮನಿ, ಕರಿಯಪ್ಪ ಸಾಂಧ್ಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 50 ವರ್ಷ ಅಧಿಕಾರದಲ್ಲಿದ್ದರೂ ಅಭಿವೃದ್ಧಿ ಏಕೆ ಆಗಿಲ್ಲ?

**ವಿಜಯಸಾಕ್ಷಿ ಸುದ್ದಿ, ಗದಗ**

ಐದು ದಶಕಗಳಿಂದ ರಾಜಕೀಯದಲ್ಲಿರುವ ಎಚ್.ಕೆ. ಪಾಟೀಲರು ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೂಲಸೌಕರ್ಯ ಕಲ್ಪಿಸುವಲ್ಲಿ ವಿಫಲರಾಗಿದ್ದಾರೆ. ಇದು ಗದಗ ಜನತೆಗೆ ಮಾಡುತ್ತಿರುವ ಘೋರ ಅನ್ಯಾಯ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಆರೋಪಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಗದಗ-ಬೆಟಗೇರಿ ನಗರಗಳಲ್ಲಿ ಕುಡಿಯುವ ನೀರಿನ ಪೂರೈಕೆ ಸಮರ್ಪಕವಾಗಿಲ್ಲ. ವಾರಕ್ಕೊಮ್ಮೆ ಅಥವಾ ಹತ್ತು ದಿನಗಳಿಗೊಮ್ಮೆ ನೀರು ಬರುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ನಗರದ ಪ್ರಮುಖ ಹಾಗೂ ಆಂತರಿಕ ರಸ್ತೆಗಳು ಗುಂಡಿಗಳಿಂದ ಕೂಡಿದ್ದು, ಧೂಳು ಮತ್ತು ಕಳಪೆ ಮೂಲಸೌಕರ್ಯದಿಂದ ಸಾರ್ವಜನಿಕರು ಹಾಗೂ ವಾಹನ ಸವಾರರು ನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ. ಗದಗ-ಬೆಟಗೇರಿ ಪ್ರದೇಶದ ನೇಕಾರರು ಹಾಗೂ ಕೈಮಗ್ಗ ಕಾರ್ಮಿಕರ ಸಮಸ್ಯೆಗಳೂ ಬಗೆಹರಿದಿಲ್ಲ. ಉದ್ಯೋಗಾವಕಾಶಗಳ ಕೊರತೆಯಿಂದ ಯುವಜನರು ಮತ್ತು ಕಾರ್ಮಿಕರು ಸಂಕಷ್ಟದಲ್ಲಿದ್ದಾರೆ ಎಂದು ಹೇಳಿದ್ದಾರೆ.

ಕಾಂಗ್ರೆಸ್ ಸರ್ಕಾರ ಬಡಜನರ ಸೇವೆಗಾಗಿ ಅಧಿಕಾರಕ್ಕೆ ಬಂದಿದೆ. ಆದರೆ ಸೇವೆ ಮಾಡುವುದನ್ನು ಬಿಟ್ಟು ಭ್ರಷ್ಟಾಚಾರದಲ್ಲಿ ತೊಡಗಿದೆ ಎಂದು ಆರೋಪಿಸಿದ ಅವರು, ಮುಂದಿನ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ನಾಯಕರಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದ್ದಾರೆ.

## ಅರಣ್ಯ ಹುತಾತ್ಮರಿಗೆ ಗೌರವ ನಮನ

**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಬಿಂಕದಕಟ್ಟಿ ಸಾಲುಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನದ ಅಂಗವಾಗಿ ಕರ್ನಾಟಕ ಅರಣ್ಯ ಇಲಾಖೆಯ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್. ಅವರು ಸಸಿಗೆ ನೀರೆರೆಯುವ ಮೂಲಕ ನಾಡಿನ ಅರಣ್ಯ ಸಂಪತ್ತಿನ ರಕ್ಷಣೆಗಾಗಿ ಪ್ರಾಣ-ತ್ಯಾಗ ಮಾಡಿದ ಅರಣ್ಯ ಹುತಾತ್ಮರಿಗೆ ಗೌರವ ನಮನ ಸಲ್ಲಿಸಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಹಿರಿಯ ದಿವಾಣಿ ನ್ಯಾಯಾಧೀಶ ಸಿ.ಎಸ್. ಶಿವನಗೌಡ್ರ, ಗದಗ ಸಾಮಾಜಿಕ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಚಂದ್ರಹಾಸ ವರ್ಣೇಕರ, ಗದಗ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಹಾಂತೇಶ ಪೊಲೀಸ್ ಪಾಟೀಲ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.



## ಸೆ. 15ಕ್ಕೆ ಅಭಿಯಂತರರ ದಿನಾಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತರತ್ನ ಸರ್ ಎಂ. ವಿಶ್ವೇಶ್ವರಯ್ಯ ಜಯಂತಿ ಅಂಗವಾಗಿ ಸೆ. 15ರಂದು ಅಭಿಯಂತರರ ದಿನಾಚರಣೆ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಆಯೋಜಿಸಲಾಗಿದೆ ಎಂದು ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಷನ್ ನಿಯೋಜಿತ ಜಿಲ್ಲಾಧ್ಯಕ್ಷ ಮಹಮ್ಮದರಫಿ ನದಾಫ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ. 15ರಂದು ಬೆಳಗ್ಗೆ 10.30ಕ್ಕೆ ಕಳಸಾಪುರ ರಿಂಗ್‌ರೋಡ್ ಬಳಿಯ ಸರ್ ಎಂ. ವಿಶ್ವೇಶ್ವರಯ್ಯ ಟೆಕ್ನಿಕಲ್ ಸೆಂಟರ್‌ನಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು.

ಅಭಿನವ ಶಿವಾನಂದ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದು, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

ಎ.ಐ. ನಾಯ್ಕ್, ಅಶೋಕ ರೆಡ್ಡಿ ಕೊಲ್ಲೂರ, ಸುಭಾಷ್ ವಿ. ಗುಗ್ಗರಿ ಅತಿಥಿಗಳಾಗಿ ಭಾಗವಹಿಸಲಿದ್ದು, ಬಸವರಾಜ ಮಲ್ಲಣ್ಣನವರ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂಘದ ಸದಸ್ಯ ಮಲ್ಲಿಕಾರ್ಜುನ ಐಲಿ ಮಾತನಾಡಿ, ಹೊಸ ವಿಚಾರಗಳು ಹಾಗೂ ತಾಂತ್ರಿಕ ಜ್ಞಾನ ಹಂಚಿಕೊಳ್ಳುವ ಉದ್ದೇಶದಿಂದ ತಾಂತ್ರಿಕ ಕೇಂದ್ರ ನಿರ್ಮಿಸಲಾಗಿದೆ.

ಕಟ್ಟಡಕ್ಕೆ ಅಗತ್ಯ ಸೌಲಭ್ಯ ಕಲ್ಪಿಸಲಾಗಿದ್ದು, ನಿರ್ಮಾಣಕ್ಕೆ ಶ್ರಮಿಸಿದವರು ಹಾಗೂ ದಾನಿಗಳನ್ನು ಸನ್ಮಾನಿಸಲಾಗುವುದು. ದೇಣಿಗೆ ನೀಡಿದವರ ಭಾವಚಿತ್ರ ಅನಾವರಣಗೊಳಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ರಾಜು ಗುಡಸಾಲಿ, ಲೋಹಿತ್ ಶಾವಿ, ಬಸವರಾಜ ಮಲ್ಲಣ್ಣನವರ, ಎಸ್.ಎಸ್. ಚವಡಿ, ಝುಡ್.ಎಂ. ಗುಲಗುಂದಿ, ಅಕ್ಷಯ್ ಗಾಳಪ್ಪನವರ, ರವಿ ಗಂಜಿ, ಪ್ರಕಾಶ್ ಆಸಂಗಿ, ನರೇಂದ್ರ ಚಿಕ್ಕನಗೌಡ್ರ, ಆರ್.ಎಫ್. ಡಾಲಾಯತ್ ಉಪಸ್ಥಿತರಿದ್ದರು.

### ಪ್ರತಿಮೆ ಅನಾವರಣ

ಅಭಿಯಂತರರ ದಿನಾಚರಣೆ ಅಂಗವಾಗಿ ಭಾರತರತ್ನ ಸರ್ ಎಂ. ವಿಶ್ವೇಶ್ವರಯ್ಯ ಅವರ ಪ್ರತಿಮೆ ಅನಾವರಣಗೊಳ್ಳಲಿದೆ. ಪ್ರತಿಮೆ ನಿರ್ಮಾಣಕ್ಕೆ ರಾಜು ಕೆ. ಗುಡಸಾಲಿ, ಜಿಶಾನ್ ಎಂ. ಗುಳಗುಂದಿ ಹಾಗೂ ಸುಧಾಕರ ಎನ್. ಮಾದಗುಂಡಿ ಶ್ರಮಿಸಿದ್ದಾರೆ.

## ರೈತರ ಬಂದ್‌ಗೆ ಸಂಪೂರ್ಣ ಬೆಂಬಲ, ಬಸ್ ಸಂಚಾರವೂ ಸ್ಥಗಿತ

# ಬರ ಘೋಷಣೆಗೆ ನರಗುಂದ ಸ್ತಬ್ಧ




**ವಿಜಯಸಾಕ್ಷಿ ಸುದ್ದಿ ನರಗುಂದ**

ಬರಪೀಡಿತ ತಾಲೂಕುಗಳ ಪಟ್ಟಿಯಿಂದ ನರಗುಂದವನ್ನು ಕೈಬಿಟ್ಟ ಸರ್ಕಾರದ ವಿರುದ್ಧ ಅನ್ನದಾತರು ರೊಚ್ಚಿಗೆದ್ದಿದ್ದು, ಬರ ಘೋಷಣೆಗೆ ಆಗ್ರಹಿಸಿ ಶನಿವಾರ ಕರೆ ನೀಡಿದ್ದ ಬಂದ್‌ಗೆ ಪಟ್ಟಣ ಸಂಪೂರ್ಣ ಸ್ತಬ್ಧವಾಯಿತು.

ಮಹಾದಾಯಿಗಾಗಿ ಮಹಾವೇದಿಕೆ ಹಾಗೂ ವಿವಿಧ ರೈತಪರ ಸಂಘಟನೆಗಳ ನೇತೃತ್ವದಲ್ಲಿ ನಡೆದ ಹೋರಾಟಕ್ಕೆ ವ್ಯಾಪಾರಸ್ಥರು ಹಾಗೂ ಸಾರ್ವಜನಿಕರು ಬೆಂಬಲ ನೀಡಿದರು.

ಪ್ರಮುಖ ಮಾರುಕಟ್ಟೆಗಳು ಸೇರಿದಂತೆ ಬಹುತೇಕ ಅಂಗಡಿ-ಮುಂಗಟ್ಟುಗಳು ಬಂದ್ ಆಗಿದ್ದವು. ರೈತರು ಬೃಹತ್ ಮೆರವಣಿಗೆ ನಡೆಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬಂದ್‌ನ ಬಿಸಿ ಸಾರಿಗೆ ವ್ಯವಸ್ಥೆಗೂ ತಟ್ಟಿದ್ದು, ಸರ್ಕಾರಿ ಬಸ್‌ಗಳು ರಸ್ತೆಗಿಳಿಯದ ಕಾರಣ ಬಸ್ ನಿಲ್ದಾಣ ಭಣಗುಡುತ್ತಿತ್ತು. ದೂರದ ಊರುಗಳಿಗೆ ತೆರಳಬೇಕಿದ್ದ ಪ್ರಯಾಣಿಕರು ಪರದಾಡಿದರು.

ಗದಗ ಜಿಲ್ಲೆಯ ಏಳು ತಾಲೂಕುಗಳ ಪೈಕಿ ಗಜೇಂದ್ರಗಡವನ್ನು ಮಾತ್ರ ಬರಪೀಡಿತ ಎಂದು ಘೋಷಿಸಲಾಗಿದ್ದು, ನರಗುಂದ, ಗದಗ, ಮುಂಡರಗಿ, ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ರೋಣ ತಾಲೂಕುಗಳನ್ನು ಕೈಬಿಡಲಾಗಿದೆ. ಮಳೆ ಮಾಪನ ಕೇಂದ್ರಗಳ ವರದಿ ಆಧರಿಸಿ ನರಗುಂದವನ್ನು ಬರಪಟ್ಟಿಯಿಂದ ಹೊರಗಿಡಲಾಗಿದೆ ಎಂದು ರೈತರು ಆರೋಪಿಸಿದರು.

ಮಳೆ ಇಲ್ಲದಿದ್ದರೂ ತಪ್ಪು ಮಳೆ ವರದಿ ನೀಡಲಾಗಿದೆ ಎಂಬ ಆರೋಪ ಕೇಳಿಬಂದಿದ್ದು, ತಕ್ಷಣ ನರಗುಂದವನ್ನು ಬರಪೀಡಿತ ತಾಲೂಕು ಎಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಗದಗ, ಧಾರವಾಡ, ಬೆಳಗಾವಿ ಹಾಗೂ ಬಾಗಲಕೋಟೆ ಜಿಲ್ಲೆಗಳ ಬರಪೀಡಿತ ಪ್ರದೇಶಗಳಿಗೂ ಪರಿಹಾರ ನೀಡುವಂತೆ ಒತ್ತಾಯಿಸಿದರು.

> ನರಗುಂದದ ರೈತರು ಬರದಿಂದ ಬೆಳೆ ಕಳೆದುಕೊಂಡು ಸಂಕಷ್ಟದಲ್ಲಿದ್ದಾರೆ. ವಾಸ್ತವ ಸ್ಥಿತಿಯನ್ನು ಅರಿತು ಸರ್ಕಾರ ಕೂಡಲೇ ಬರ ಘೋಷಿಸಿ ಪರಿಹಾರ ನೀಡಬೇಕು. ಇಲ್ಲವಾದರೆ ಹೋರಾಟ ಮತ್ತಷ್ಟು ತೀವ್ರಗೊಳಿಸಲಾಗುವುದು.
>
> **– ಶಂಕರಣ್ಣ ಅಂಬಲಿ, ರೈತ ಮುಖಂಡ**



# ಶಿವನ ಜಡೆಯಿಂದ ಅವತಾರ... ಜಾನಪದದ ಜೀವಾಳವಾದ ವೀರಭದ್ರ!

## ಸೆ. 15ರಂದು ನಾಡಿನಾದ್ಯಂತ ವೀರಭದ್ರೇಶ್ವರ ಜಯಂತಿ ವೈಭವ

ಶಿವನ ಕೋಪದಿಂದ ಅವತರಿಸಿದ ವೀರಭದ್ರಸ್ವಾಮಿ, ಅಸುರರ ಶಿಕ್ಷಕ ಹಾಗೂ ದೇವತೆಗಳ ರಕ್ಷಕನೆಂಬ ನಂಬಿಕೆಯಿಂದ ನಾಡಿನಾದ್ಯಂತ ಆರಾಧಿಸಲ್ಪಡುತ್ತಿರುವ ದೇವರು.

ವೀರಭದ್ರನ ಪುರಾಣ ಕಥೆ, ಆರಾಧನಾ ಪರಂಪರೆ ಹಾಗೂ ಆತನ ಮಹಿಮೆಯನ್ನು ಸಾರುವ ಜಾನಪದ ಕಲೆಗಳು ಇಂದಿಗೂ ಜನಜೀವನದೊಂದಿಗೆ ಬೆಸೆದುಕೊಂಡಿವೆ. ಈ ಹಿನ್ನೆಲೆಯಲ್ಲಿ ಸೆ. 15ರಂದು ನಾಡಿನಾದ್ಯಂತ ಇರುವ ವೀರಭದ್ರೇಶ್ವರ ಸ್ವಾಮಿ ದೇವಸ್ಥಾನಗಳಲ್ಲಿ ವೀರಭದ್ರೇಶ್ವರ ಜಯಂತಿಯನ್ನು ವೈಭವದಿಂದ ಆಚರಿಸಲಾಗುತ್ತಿದೆ.

ಪುರಾಣಗಳ ಪ್ರಕಾರ, ದಕ್ಷ ಬ್ರಹ್ಮನು ತನ್ನ ಮಗಳು ಪಾರ್ವತಿಯ ಪತಿ ಶಿವನಿಗೆ ಅವಮಾನ ಮಾಡಿದ ಹಿನ್ನೆಲೆಯಲ್ಲಿ ಪಾರ್ವತಿ ನೊಂದಿದ್ದರು. ತಂದೆ ದಕ್ಷನು ಏರ್ಪಡಿಸಿದ್ದ ಯಜ್ಞದಲ್ಲಿ ಶಿವನಿಗೆ ಗೌರವ ನೀಡದಿರುವುದ-ರಿಂದ ಪಾರ್ವತಿ ಯಜ್ಞಕುಂಡಕ್ಕೆ ಹಾರಿ ಪ್ರಾಣತ್ಯಾಗ ಮಾಡಿದರು. ಇದರಿಂದ ಕೆರಳಿದ ಶಿವನು ತನ್ನ ಜಡೆಯನ್ನು ನೆಲಕ್ಕೆ ಅಪ್ಪಳಿಸಿದಾಗ ವೀರಭದ್ರನು ಅವತಾರ ತಳೆದನು.

ತನ್ನ ಕರ್ತವ್ಯವೇನೆಂದು ವೀರಭದ್ರ ಕೇಳಿದಾಗ, ದಕ್ಷ ಬ್ರಹ್ಮನನ್ನು ಸಂಹ-ರಿಸುವಂತೆ ಶಿವನು ಆಜ್ಞಾಪಿಸಿದನು. ಶಿವನ ಆದೇಶದಂತೆ ದಕ್ಷನೊಂದಿಗೆ ಯುದ್ಧ ಮಾಡಿದ ವೀರಭದ್ರನು ಆತನನ್ನು ಸಂಹರಿಸಿದನು. ಹೀಗೆ ಶಿವನ ಆಜ್ಞೆಯನ್ನು ಪಾಲಿಸಿದ ವೀರಭದ್ರನು ಪುರಾಣಗಳಲ್ಲಿ ಅಸುರರ ಶಿಕ್ಷಕ ಹಾಗೂ ದೇವತೆಗಳ ರಕ್ಷಕನಾಗಿ ಬಿಂಬಿತನಾಗಿದ್ದಾನೆ.

### ಉತ್ತರ ಕರ್ನಾಟಕದಲ್ಲಿ ವಿಶೇಷ ಆರಾಧನೆ

ದೇಶದ ವಿವಿಧ ಭಾಗಗಳಲ್ಲಿ ವೀರಭದ್ರಸ್ವಾಮಿಯ ದೇವಸ್ಥಾನಗಳಿದ್ದು, ಕರ್ನಾಟಕದ ಅದರಲ್ಲೂ ಉತ್ತರ ಕರ್ನಾಟಕದಲ್ಲಿ ಈ ದೇವರ ಆರಾಧನೆಗೆ ವಿಶೇಷ ಸ್ಥಾನವಿದೆ. ಅನೇಕ ಕುಟುಂಬಗಳು ವೀರಭದ್ರಸ್ವಾಮಿಯನ್ನು ಮನೆದೇವರನ್ನಾಗಿ ಆರಾಧಿಸುತ್ತವೆ. ಪ್ರತಿ ಮಂಗಳವಾರ ವೀರಭದ್ರಸ್ವಾಮಿಯ



ವಾರವೆಂದು ಪರಿಗಣಿಸಿ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಪುನಸ್ಕಾರ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ.

ವೀರಭದ್ರನ ಅವತಾರ ಹಾಗೂ ಮಹಿಮೆಯನ್ನು ಬಿಂಬಿಸುವ ಜಾನಪದ ಕಲೆಗಳಿಗೂ ಉತ್ತರ ಕರ್ನಾಟಕದಲ್ಲಿ ವಿಶಿಷ್ಟ ಸ್ಥಾನವಿದೆ. ವೀರಗಾಸೆ, ವೀರಭದ್ರ ಕುಣಿತ, ಲಿಂಗದ ವೀರ, ಕಾಸಿ ಕುಣಿತ ಮೊದಲಾದ ಹೆಸರುಗಳಿಂದ ಕರೆಯಲ್ಪಡುವ ಈ ಕಲೆಗಳು ಗ್ರಾಮೀಣ ಜನಜೀವನದಲ್ಲಿ ಇಂದಿಗೂ ಜೀವಂತವಾಗಿವೆ.

ಈ ಕಲೆಯನ್ನು ಪ್ರದರ್ಶಿಸುವವರು 'ಪುರವಂತರು' ಎಂದು ಕರೆಯಲ್ಪಡುತ್ತಾರೆ. ಸಾಂಬಾಳ ವಾದನದ ತಾಳಕ್ಕೆ ತಕ್ಕಂತೆ ಕುಣಿಯುವ ಪುರವಂತರು, ಕೈಯಲ್ಲಿ ಉದ್ದನೆಯ ಕತ್ತಿಯನ್ನು ಝಳಪಿಸುತ್ತಾ 'ಹಾ..ಹಾ ರುದ್ರ, ವೀರ... ಭದ್ರ' ಎಂಬ ಒಡಪುಗಳ ಮೂಲಕ ವೀರಭದ್ರನ ಅವತಾರ, ಶೌರ್ಯ ಹಾಗೂ ಮಹಿಮೆಯನ್ನು ಸಾರುತ್ತಾರೆ. ಅವರ ನೃತ್ಯ ಮತ್ತು ವಾದ್ಯ ವೈಭವ ನೋಡುಗರಲ್ಲಿ ರೋಮಾಂಚನ ಮೂಡಿಸುವಂತಿರುತ್ತದೆ.

### ಮದುವೆ ಸಂಪ್ರದಾಯದಲ್ಲೂ ವೀರಭದ್ರನಿಗೆ ಸ್ಥಾನ

ವೀರಭದ್ರಸ್ವಾಮಿಯನ್ನು ಮನೆದೇವರನ್ನಾಗಿ ಆರಾಧಿಸುವ ಕುಟುಂಬಗಳಲ್ಲಿ ಮದುವೆ ಸಂದರ್ಭದಲ್ಲಿಯೂ ವಿಶೇಷ ಆಚರಣೆಗಳು ನಡೆಯುತ್ತವೆ. ಅದರಲ್ಲೂ ಗಂಡು ಮಕ್ಕಳ ಮದುವೆಯಲ್ಲಿ 'ಗುಗ್ಗಳ ಮದುವೆ' ಮಾಡುವ ಸಂಪ್ರದಾಯ ಉತ್ತರ ಕರ್ನಾಟಕದ ಹಲವು ಭಾಗಗಳಲ್ಲಿದೆ.

ಮದುವೆಯ ದಿನ ಪುರವಂತರನ್ನು ಕರೆಸಿ ವೀರಭದ್ರಸ್ವಾಮಿ ದೇವಸ್ಥಾನದವರೆಗೆ ಮೆರವಣಿಗೆ ನಡೆಸಲಾಗುತ್ತದೆ. ದಾರಿಯುದ್ದಕ್ಕೂ ಪುರವಂತರು ಸಾಂಬಾಳ ವಾದನಕ್ಕೆ ಹೆಜ್ಜೆ ಹಾಕುತ್ತಾ, ಕತ್ತಿ ಝಳಪಿಸುತ್ತಾ ವೀರಭದ್ರನ ಮಹಿಮೆ ಸಾರುವ ಒಡಪುಗಳನ್ನು ಹೇಳುತ್ತಾರೆ. ಈ ಮೂಲಕ ಧಾರ್ಮಿಕ ನಂಬಿಕೆಯೊಂದಿಗೆ ಜಾನಪದ ಪರಂಪರೆಯೂ ಮುಂದುವ-ರಿಯುತ್ತದೆ.

ಕನ್ನಡ ಜಾನಪದ ಸಾಹಿತ್ಯ ಹಾಗೂ ಕಲಾ ಪರಂಪರೆಯಲ್ಲಿ ವೀರಭದ್ರನ ಕುಣಿತಕ್ಕೆ ವಿಶಿಷ್ಟ ಸ್ಥಾನವಿದೆ. ಪುರಾಣದ ಕಥೆಯನ್ನು ಕೇವಲ ಕೇಳುವುದಕ್ಕೆ ಸೀಮಿತಗೊಳಿಸದೆ, ನೃತ್ಯ, ಸಂಗೀತ ಮತ್ತು ಒಡಪುಗಳ ಮೂಲಕ ಜನಸಾಮಾನ್ಯರಿಗೆ ತಲುಪಿಸುವ ಕಾರ್ಯವನ್ನು ಪುರವಂತರು ತಲೆತಲಾಂತರಗಳಿಂದ ಮಾಡಿಕೊಂಡು ಬಂದಿದ್ದಾರೆ.

### ಜಯಂತಿಗೆ ಸಜ್ಜಾಗುತ್ತಿರುವ ಭಕ್ತರು

ಇಂತಹ ಮಹಾಮಹಿಮ ವೀರಭದ್ರಸ್ವಾಮಿಯ ಜಯಂತಿ ಆಚರಣೆಯ ಪರಂಪರೆ ಇತ್ತೀಚಿನ ವರ್ಷಗಳಲ್ಲಿ ಮತ್ತಷ್ಟು ವಿಸ್ತಾರಗೊಂಡಿದೆ. ಈ ವರ್ಷದ ವೀರಭದ್ರೇಶ್ವರ ಜಯಂತಿ ಸೆ. 15ರಂದು ನಾಡಿನಾದ್ಯಂತ ಇರುವ ವೀರಭದ್ರಸ್ವಾಮಿ ದೇವಸ್ಥಾನಗಳಲ್ಲಿ ವೈಭವದಿಂದ ನಡೆಯಲಿದೆ. ಭಕ್ತರು ವಿಶೇಷ ಪೂಜೆ, ಧಾರ್ಮಿಕ ಆಚರಣೆ ಹಾಗೂ ಜಾನಪದ ಕಾರ್ಯಕ್ರಮಗಳ ಮೂಲಕ ವೀರಭದ್ರಸ್ವಾಮಿಯನ್ನು ಸ್ಮರಿಸಲಿದ್ದಾರೆ.

ವೀರಭದ್ರಸ್ವಾಮಿಯ ಆರಾಧನೆ ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗಿಲ್ಲ. ಅದರೊಂದಿಗೆ ಬೆಸೆದುಕೊಂಡಿರುವ ವೀರಗಾಸೆ, ಪುರವಂತಿಕೆ, ಒಡಪು, ಸಾಂಬಾಳ ವಾದನ ಹಾಗೂ ವಿವಿಧ ಆಚರಣೆಗಳು ಉತ್ತರ ಕರ್ನಾಟಕದ ಶ್ರೀಮಂತ ಜಾನಪದ ಸಂಸ್ಕೃತಿಯ ಪ್ರತೀಕವಾಗಿವೆ. ಹೀಗಾಗಿ ವೀರಭದ್ರೇಶ್ವರ ಜಯಂತಿ ಧಾರ್ಮಿಕ ನಂಬಿಕೆಯ ಜತೆಗೆ ಈ ವಿಶಿಷ್ಟ ಜನಪದ ಪರಂಪರೆಯನ್ನು ಸ್ಮರಿಸುವ ಸಂದರ್ಭವೂ ಆಗಿದೆ.

– ವೀರಣ್ಣ ಹಾಲಪ್ಪ ಪವಾಡದ,
ಸಾ. ಶಿಗ್ಲಿ, ತಾ. ಲಕ್ಷ್ಮೇಶ್ವರ

---

## ಸಣ್ಣ ಸುದ್ದಿಗಳು

### ಗಣೇಶ ವಿಸರ್ಜನೆ ವೇಳೆ ಮದ್ಯ ಮಾರಾಟ, ಸಾಗಾಟ ನಿಷೇಧ

**ವಿಜಯಸಾಕ್ಷಿ ಸುದ್ದಿ, ಗದಗ**

ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಶಾಂತಿ-ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಗದಗ ಜಿಲ್ಲೆಯಲ್ಲಿ ಗಣೇಶ ಮೂರ್ತಿಗಳ 5, 7, 9, 11, 13, 15, 17, 19 ಹಾಗೂ 21ನೇ ದಿನದ ವಿಸರ್ಜನೆ ಸಂದರ್ಭದಲ್ಲಿ ವಿವಿಧ ಅವಧಿಯಲ್ಲಿ ಮದ್ಯ ಮಾರಾಟ ಮತ್ತು ಸಾಗಾಟ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ತಿಳಿಸಿದ್ದಾರೆ.

ಸೆ.18 ಬೆಳಗ್ಗೆ 6ರಿಂದ ಸೆ.19 ಬೆಳಗ್ಗೆ 6ರವರೆಗೆ, ಸೆ.20ರಿಂದ 21, ಸೆ.22ರಿಂದ 23 ಹಾಗೂ ಸೆ.24ರಿಂದ 25ರವರೆಗೆ ಜಿಲ್ಲೆಯಾದ್ಯಂತ ಮದ್ಯ ನಿಷೇಧ ಜಾರಿಯಲ್ಲಿರುತ್ತದೆ.

ಸೆ.26ರಿಂದ 27ರವರೆಗೆ ಮುಳಗುಂದ, ಲಕ್ಷ್ಮೇಶ್ವರ ಹಾಗೂ ನರೇಗಲ್ ಠಾಣಾ ವ್ಯಾಪ್ತಿಯಲ್ಲಿ, ಸೆ.28ರಿಂದ 29ರವರೆಗೆ ಲಕ್ಷ್ಮೇಶ್ವರ ಠಾಣಾ ವ್ಯಾಪ್ತಿಯಲ್ಲಿ, ಸೆ.30ರಿಂದ ಅ.1ರವರೆಗೆ ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮ ವ್ಯಾಪ್ತಿಯಲ್ಲಿ, ಅ.2ರಿಂದ 3ರವರೆಗೆ ಲಕ್ಷ್ಮೇಶ್ವರ ಠಾಣಾ ವ್ಯಾಪ್ತಿಯಲ್ಲಿ ಹಾಗೂ ಅ. 4ರಿಂದ 5ರವರೆಗೆ ಗದಗ-ಬೆಟಗೇರಿ ನಗರಸಭೆ ಮತ್ತು ಗಜೇಂದ್ರಗಡ ಠಾಣಾ ವ್ಯಾಪ್ತಿಯಲ್ಲಿ ಮದ್ಯ ಮಾರಾಟ-ಸಾಗಾಟ ನಿಷೇಧಿಸಲಾಗಿದೆ.

ನಿಷೇಧ ಅವಧಿಯಲ್ಲಿ ಸಂಬಂಧಿಸಿದ ಪ್ರದೇಶಗಳ ಬಾರ್, ಕ್ಲಬ್, ಬಿಯರ್ ಹಾಗೂ ಭಾರತೀಯ ತಯಾರಿಕಾ ಮದ್ಯದ ಅಂಗಡಿಗಳನ್ನು ಕಡ್ಡಾಯವಾಗಿ ಮುಚ್ಚಬೇಕು. ಪರಿಸ್ಥಿತಿಗೆ ಅನುಗುಣವಾಗಿ ಕರ್ನಾಟಕ ಅಬಕಾರಿ ಕಾಯ್ದೆಯಡಿ ಕ್ರಮ ಕೈಗೊಳ್ಳುವಂತೆ ಅಬಕಾರಿ ಅಧಿಕಾರಿಗಳಿಗೆ ಸೂಚಿಸಲಾಗಿದೆ.

### ಪ್ರತಿಭಾವಂತ ಮಕ್ಕಳಿಗೆ ಪ್ರಶಸ್ತಿಯ ಗರಿ; ಅ.8ರವರೆಗೆ ಅರ್ಜಿ

**ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ 2026-27ನೇ ಸಾಲಿನ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ವಿವಿಧ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿರುವ 5ರಿಂದ 18 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 8 ಕೊನೆಯ ದಿನವಾಗಿದೆ.

ನಾವೀನ್ಯತೆ, ತಾರ್ಕಿಕ/ಶೈಕ್ಷಣಿಕ ಸಾಧನೆ, ಕ್ರೀಡೆ, ಕಲೆ, ಸಾಂಸ್ಕೃತಿಕ ಹಾಗೂ ಸಂಗೀತ ಕ್ಷೇತ್ರಗಳಲ್ಲಿ ಅಪ್ರತಿಮ ಪ್ರತಿಭೆ ಮತ್ತು ಸಾಧನೆ ಮಾಡಿರುವ ಮಕ್ಕಳನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರತಿ ಕ್ಷೇತ್ರದಿಂದ ಇಬ್ಬರಂತೆ ಒಟ್ಟು ಎಂಟು ಮಕ್ಕಳನ್ನು ಆಯ್ಕೆ ಮಾಡಲಾಗುತ್ತಿದ್ದು, ಆಯ್ಕೆಯಾದ ಪ್ರತಿ ಮಗುವಿಗೆ ರೂ.10,000 ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ಮಕ್ಕಳು 2026ರ ಜುಲೈ 31ಕ್ಕೆ ಅನ್ವಯವಾಗುವಂತೆ 5ರಿಂದ 18 ವರ್ಷದೊಳಗಿನವರಾಗಿರಬೇಕು. ವಯಸ್ಸಿನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು. ಮಗುವಿನ ಪ್ರತಿಭೆ ಮತ್ತು ಸಾಧನೆಗೆ ಸಂಬಂಧಿಸಿದಂತೆ ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟವಾಗಿರುವ ಪತ್ರಿಕಾ ತುಣುಕುಗಳು ಹಾಗೂ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ಅಂತರರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಅಥವಾ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿರುವ ಅಥವಾ ಪ್ರಶಸ್ತಿ ಪಡೆದಿರುವ ಕುರಿತು ದಾಖಲೆಗಳನ್ನು ಸಹ ಸಲ್ಲಿಸಬೇಕು. ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ಮಕ್ಕಳು ಕನಿಷ್ಠ ಐದು ವರ್ಷಗಳಿಂದ ಕರ್ನಾಟಕ ರಾಜ್ಯದಲ್ಲಿ ನೆಲೆಸಿರಬೇಕು. ಈ ಕುರಿತು ಸ್ವಯಂ ದೃಢೀಕರಣ ಸಲ್ಲಿಸುವುದು ಕಡ್ಡಾಯವಾಗಿದೆ.

ಈ ಹಿಂದೆ ಜಿಲ್ಲಾ ಮಟ್ಟದಲ್ಲಿ ಇದೇ ಪ್ರಶಸ್ತಿ ಪಡೆದ ಮಕ್ಕಳಿಗೆ ಪುನಃ ಪ್ರಶಸ್ತಿ ನೀಡಲು ಅವಕಾಶವಿರುವುದಿಲ್ಲ. ಮಗುವಿನ ಸಾಧನೆ ಮತ್ತು ಪ್ರತಿಭೆಯನ್ನು ಸಮರ್ಥಿಸುವ ಅಗತ್ಯ ಪೂರಕ ದಾಖಲೆಗಳನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸಬೇಕು.

2026ನೇ ಸಾಲಿನ ಪ್ರಶಸ್ತಿಗೆ ನಿಗದಿಪಡಿಸಿರುವ ಅರ್ಜಿ ನಮೂನೆಯನ್ನು ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ, ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಇವರ ಕಚೇರಿಗೆ ಸಲ್ಲಿಸಬೇಕು. ನಿಗದಿತ ದಿನಾಂಕ ಹಾಗೂ ಸಮಯದ ನಂತರ ಸಲ್ಲಿಸುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ 08372-220711 ದೂರವಾಣಿ ಸಂಖ್ಯೆಗೆ ಅಥವಾ ಗದಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

## ಮಲ್ಲೇಶ ಡಿ.ಎಚ್. ಅವರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರ ದಿನಾಚರಣೆ ಅಂಗವಾಗಿ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಅಡವಿ ಸೋಮಾಪುರ ಸಣ್ಣ ತಾಂಡೆ ಶಾಲೆಯ ಮುಖ್ಯಶಿಕ್ಷಕ ಮಲ್ಲೇಶ ಡಿ.ಎಚ್. ಅವರನ್ನು ರೋಟರಿ ಸೆಂಟ್ರಲ್ ಗದಗ ವತಿಯಿಂದ ಸನ್ಮಾನಿಸಲಾಯಿತು. ವೆಲ್‌ಫೇರ್ ಟೌನ್‌ಶಿಪ್ ಲೇಔಟ್‌ನ ಅಧ್ಯಕ್ಷ ಸತೀಶ್ ಕಟ್ಟಿಮನಿ, ಮಹೇಶ ಶಿವಾಜಿ, ವಿ.ಎನ್. ಬೇಂದ್ರೆ, ಸಿ.ಜಿ. ಹಿರೇಮಠ, ತೋಂಟೇಶ ಬೇವಿನಮರದ, ಆರ್.ಎಲ್. ಹಂಸನೂರ, ಎ.ಎಸ್. ಮಾಳೋದೆ, ಜಂಬುನಾಥ ಹರಿವಾಣ, ನಾಗರತ್ನ ಹರಿವಾಣ, ಸುನೀತಾ ಹರಿವಾಣ, ಬಸವರಾಜ ಸವಣೂರು, ಲಕ್ಷ್ಮಣ ವಡ್ಡರಕಲ್ಲ, ಬಂಡೆಣ್ಣನವರ ಸೇ-ರಿದಂತೆ ಸದಸ್ಯರು ಹಾಗೂ ಬಂಧುಗಳು ಉಪಸ್ಥಿತರಿದ್ದರು.



ಗದಗ: ರೋಟರಿ ಸೆಂಟ್ರಲ್ ಗದಗ ವತಿಯಿಂದ ಶಿಕ್ಷಕರ ದಿನಾಚರಣೆ ಅಂಗವಾಗಿ ನೀಡಲಾದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಅಡವಿಸೋಮಾಪೂರ ಸಣ್ಣ ತಾಂಡೆ ಶಾಲೆಯ ಮುಖ್ಯಶಿಕ್ಷಕ ಮಲ್ಲೇಶ ಡಿ.ಎಚ್. ಅವರನ್ನು ಶಾಲಾ ಶಿಕ್ಷಕರು, ಶಾಲಾ ಉಸ್ತುವಾರಿ ಸಮಿತಿ ಸದಸ್ಯರು, ಗ್ರಾಮದ ಹಿರಿಯರು ಹಾಗೂ ಶಾಲೆಯ ಹಳೇ ವಿದ್ಯಾರ್ಥಿಗಳು ಪ್ರೀತಿಪೂರ್ವಕವಾಗಿ ಸನ್ಮಾನಿಸಿದ ಸಂದರ್ಭದ ದೃಶ್ಯ.

---

### ಕದಳಿಶ್ರೀ ವೇದಿಕೆಯಿಂದ ಅಮೃತ ಭೋಜನ-ಜ್ಞಾನ ಸಿಂಚನ

## ಮಕ್ಕಳಲ್ಲಿ ಜ್ಞಾನದ ಸೌಂದರ್ಯವಿರಲಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳ ಮನಸ್ಸು ಕಂಪು, ಮಕರಂದ ಬೀರದ ಕಾಗದದ ಹೂವಾಗದೆ, ನೈಸರ್ಗಿಕವಾಗಿ ಅರಳುವ ಸುಂದರ ಹೂವಾಗಬೇಕು. ಅವರಲ್ಲಿ ಜ್ಞಾನದ ಸೌಂದರ್ಯ ಮೂಡಿ, ಜ್ಞಾನದ ಶಿಖರವೇರಿ ಉನ್ನತಿ ಸಾಧಿಸುವಂತಾಗಬೇಕು ಎಂದು ಚಿಂತಕಿ ಪುಷ್ಪಾ ಭಂಡಾರಿ ಹೇಳಿದರು.

ನಗರದ ಸರ್ಕಾರಿ ಹಿರಿಯ ಪ್ರಾಥ-ಮಿಕ ಶಾಲೆ ನಂ. 19ರಲ್ಲಿ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆ ವತಿಯಿಂದ ಶ್ರಾವಣಮಾಸದ ಅಂಗವಾಗಿ ಆಯೋಜಿಸಿದ್ದ ಅಮೃತ ಭೋಜನ-ಜ್ಞಾನ ಸಿಂಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಾಲೆಗಳು ಭವ್ಯ ಭಾರತದ ಭವಿಷ್ಯದ ಪ್ರಜೆಗಳನ್ನು ರೂಪಿಸುವ ಕೇಂದ್ರಗಳಾಗಿದ್ದು, ಸರ್ಕಾರಿ ಶಾಲೆಗಳು ಮಕ್ಕಳಿಗೆ ಬದುಕನ್ನು ಅರ್ಥೈಸಿಕೊಳ್ಳುವ ಶಿಕ್ಷಣ ನೀಡುತ್ತಿವೆ.

ಶಾಲೆಯ ಗೋಡೆಗಳ ಮೇಲಿನ ಬರಹ, ಚಿತ್ರಗಳು ಮಕ್ಕಳಲ್ಲಿ ಶೈಕ್ಷಣಿಕ ಚಿಂತನೆ

> ಮಕ್ಕಳಲ್ಲಿ ಓದುವ ಹವ್ಯಾಸ ಮತ್ತು ಜ್ಞಾನದ ಹಂಬಲ ಬೆಳೆಸುವುದೇ ಅವರ ಭವಿಷ್ಯಕ್ಕೆ ನಾವು ನೀಡಬಹುದಾದ ಅತ್ಯುತ್ತಮ ಕೊಡುಗೆ.
> – ಪುಷ್ಪಾ ಭಂಡಾರಿ, ಚಿಂತಕಿ

ಮೂಡಿಸುತ್ತಿದ್ದು, ಸಂತಸದಾಯಕ ಕಲಿಕೆಯೊಂದಿಗೆ ಮಕ್ಕಳು ಸಾಧನೆ ಮಾಡಬೇಕು ಎಂದರು.

ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಿಸಿ ಮಾತನಾಡಿದ ಕಾರ್ಮಿಕ ಮುಖಂಡ ನಿಂಗಪ್ಪ ಕಟ್ಟಿಮನಿ, ಶಿಕ್ಷಕರು ಕ್ರಿಯಾಶೀಲ ಹಾಗೂ ವಿಶಿಷ್ಟ ಚಿಂತನೆಯ ಮೂಲಕ ಮಕ್ಕಳಿಗೆ ಜ್ಞಾನ ನೀಡುತ್ತಿದ್ದಾರೆ.

ಮಕ್ಕಳು ಓದುವ ಹವ್ಯಾಸ ಬೆಳೆಸಿಕೊಂಡು, ಪುಸ್ತಕಗಳ ಮೂಲಕ ಜ್ಞಾನ ವೃದ್ಧಿಸಿಕೊಳ್ಳಬೇಕು. ದುಶ್ಚಟಗಳಿಂದ ದೂರವಿದ್ದು ಸದ್ಗುಣಗಳನ್ನು ರೂಢಿಸಿಕೊಳ್ಳಬೇಕು ಎಂದರು.

ಸಿಹಿ ಭೋಜನ ವಿತರಿಸಿದ ಚಿಂತಕ ಸೈಯ್ಯದ ಹೊಂಬಳ ಬಾಜೀಗಾರ, ಮಕ್ಕಳು ಟಿ.ವಿ. ಮತ್ತು ಮೊಬೈಲ್‌ನಿಂದ ದೂರವಿದ್ದು ಓದಿನಲ್ಲಿ ತೊಡಗಬೇಕು.

ತಂದೆ-ತಾಯಿ ನಿಮ್ಮ ಭವಿಷ್ಯದ ಬಗ್ಗೆ ಕಟ್ಟಿಕೊಂಡಿರುವ ಕನಸುಗಳನ್ನು ನನಸು ಮಾಡಲು ಕಷ್ಟಪಟ್ಟು ಓದಿ ಉನ್ನತ ಸ್ಥಾನಕ್ಕೇರಬೇಕು ಎಂದು ಸಲಹೆ ನೀಡಿದರು.

ವೇದಿಕೆ ಸಂಚಾಲಕಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಚಿಂತಕಿ ನೀಲಾ ವಸ್ತ್ರದ, ಡಾ. ಎ.ಎನ್. ಶಾಲಗಾರ, ಎಫ್.ವಿ. ಮರಿಗೌಡ್ರ ಉಪಸ್ಥಿತರಿದ್ದರು. ರಾಜು ಈಳಿಗೇರ, ಸಂಜನಾ ಕೊರ್ಲಹಳ್ಳಿ ಹಾಗೂ ಸ್ವಾತಿ ಅನ್ವಾಲ ವಚನ ಪ್ರಾರ್ಥನೆ ನೆರವೇರಿಸಿದರು. ಮುಖ್ಯೋಪಾಧ್ಯಾಯಿನಿ ಎಲ್.ಎಫ್. ಹೊಸಮನಿ ಸ್ವಾಗತಿಸಿದರು. ಎಸ್.ಎಸ್. ಸುಳಿಕೇರಿ ನಿರೂಪಿಸಿ, ಎ. ಎಚ್. ಮುಳಗುಂದ ವಂದಿಸಿದರು.

ಕದಳಿಶ್ರೀ ವೇದಿಕೆಯಿಂದ ಅತಿಥಿ ಗಣ್ಯರನ್ನು ಸನ್ಮಾನಿಸಲಾಯಿತು.

ನಂದಾ ಶ್ಯಾವಿ, ಗೌರಮ್ಮ ಭಾವಿಕಟ್ಟಿ, ವಿದ್ಯಾ ಹೊಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

## ಸೆ. 14ಕ್ಕೆ ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕೆ.ಎಚ್. ಪಾಟೀಲ ವೃತ್ತದಲ್ಲಿ ಸುದರ್ಶನ ಯುವ ಮಂಡಳ ವತಿಯಿಂದ ಸೆ. 14ರಂದು ಹಿಂದೂ ಮಹಾಗಣಪತಿ ಪ್ರತಿಷ್ಠಾಪಿಸಲಾಗುವುದು. ಸೆ. 16ರಂದು ನಡೆಯುವ ರಸಮಂಜರಿ ಕಾರ್ಯಕ್ರಮದಲ್ಲಿ ರಿಯಲ್ ಸ್ಟಾರ್ ಉಪೇಂದ್ರ ಪಾಲ್ಗೊಳ್ಳಲಿದ್ದಾರೆ ಎಂದು ಮಂಡಳದ ಗೌರವಾಧ್ಯಕ್ಷ ವಿನಾಯಕ ಮಾನ್ವಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ತಮ ಮಳೆ, ಸಮೃದ್ಧ ಬೆಳೆ ಹಾಗೂ ರೈತರ ಕಲ್ಯಾಣ-ಕ್ಕಾಗಿ ಸಂಕಲ್ಪದೊಂದಿಗೆ ಗಣಪತಿ ಆರಾಧನೆ ಆಯೋಜಿಸಲಾಗಿದೆ. ಸೆ. 14ರಂದು ಸಂಜೆ 6ಕ್ಕೆ ಗಣೇಶ ಮೂರ್ತಿ ಪ್ರತಿಷ್ಠಾಪನೆ ನಡೆಯಲಿದ್ದು, ಸೆ. 16ರಂದು ವಿವಿಧ ಕಾರ್ಯಕ್ರಮಗಳೊಂದಿಗೆ ಮೆರವಣಿಗೆ ನಡೆಯಲಿದೆ. ಮೆರವಣಿಗೆಯಲ್ಲಿ ಡಿಜೆ ಇರಲಿದೆ ಎಂದರು.

ಗಣೇಶೋತ್ಸವದ ಅಂಗವಾಗಿ ಸೆ. 19ರಂದು ಗಣಹೋಮ, ಸೆ. 20ರಂದು ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರ, ಸೆ. 21ರಂದು ರುದ್ರಪಠಣ, ಸೆ. 22ರಂದು ಮಕ್ಕಳಿಗಾಗಿ ವಿವಿಧ ಆಟ ಹಾಗೂ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಸೆ. 23ರಂದು ಧರ್ಮಸಭೆ ನಡೆಯಲಿದ್ದು, ಚಕ್ರವರ್ತಿ ಸೂಲಿಬೆಲೆ ಭಾಗವಹಿಸಲಿದ್ದಾರೆ. ಸೆ. 24ರಂದು ಲಲಿತಾ ಸಹಸ್ರನಾಮ ಪಠಣ, ಸೆ. 25ರಂದು ರಂಗೋಲಿ ಸ್ಪರ್ಧೆ ಹಾಗೂ ಸೆ. 26ರಂದು ವಿಶೇಷ ರಂಗೋಲಿ ಕಾರ್ಯಕ್ರಮ ನಡೆಯಲಿದೆ.

ಸೆ. 30ರಂದು ಅನ್ನಸಂತರ್ಪಣೆ, ರಕ್ತದಾನ ಶಿಬಿರ, ಲಕ್ಷದೀಪೋತ್ಸವ ಹಾಗೂ ಕುಂಕುಮಾರ್ಚನೆ ನಡೆಯಲಿವೆ. ಅ. 2ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು, ಅ. 3ರಂದು ವಿಶೇಷ ಕಾರ್ಯಕ್ರಮದ ಬಳಿಕ ಅ. 4ರಂದು ಗಣೇಶ ಮೂರ್ತಿ ವಿಸರ್ಜನೆ ನೆರವೇರಲಿದೆ.

ಮಂಡಳದ ಸದಸ್ಯ ರಾಘವೇಂದ್ರ ಹಬೀಬ್ ಮಾತನಾಡಿ, ಕಳೆದ ನಾಲ್ಕು ವರ್ಷಗಳಿಂದ ಗಣೇಶೋತ್ಸವದ ಅಂಗವಾಗಿ ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಬಡ ಕುಟುಂಬಗಳ ಮಕ್ಕಳಿಗೆ ಉಚಿತ ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿಸುವ ಕಾರ್ಯಕ್ಕೆ ಈ ಬಾರಿಯೂ ಆದ್ಯತೆ ನೀಡಲಾಗಿದೆ. ಅಗತ್ಯವಿರುವ ಮಕ್ಕಳನ್ನು ಗುರುತಿಸಿ ಚಿಕಿತ್ಸೆ, ಊಟ, ವಸತಿ ಹಾಗೂ ಸಾರಿಗೆ ವ್ಯವಸ್ಥೆಯನ್ನು ಸಮಿತಿ ವತಿಯಿಂದ ಕಲ್ಪಿಸಲಾಗುವುದು ಎಂದರು.

ಸೆ. 23ರಂದು ನಡೆಯುವ ಧರ್ಮಸಭೆಯಲ್ಲಿ ಧಾರ್ಮಿಕ ಆಚರಣೆಗಳ ಸಂದರ್ಭದಲ್ಲಿ ಕಾನೂನು ಪಾಲನೆ, ಶಾಂತಿ ಹಾಗೂ ಸೌಹಾರ್ದ ಕಾಪಾಡುವ ಕುರಿತು ಜಾಗೃತಿ ಮೂಡಿಸಲಾಗುವುದು ಎಂದು ಆಯೋಜಕರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕಮಲೇಶ ಜೈನ್, ಶಿವು ಪೂಜಾರ, ವಿಜಯಕುಮಾರ ಹಿರೇಮಠ, ಶಂಕರ ದಹಿಂಡೆ, ಬಸವರಾಜ ಅಳಗವಾಡಿ, ಮಾರುತಿ, ಅಶ್ವಿನಿ ಸೇರಿದಂತೆ ಮಂಡಳದ ಪದಾಧಿಕಾರಿಗಳು ಉಪಸ್ಥಿತರಿದ್ದರು.

---

### ತಂದೆ-ತಾಯಿ ಜನ್ಮ ನೀಡಿದರೆ, ಶಿಕ್ಷಕರು ಬದುಕಿನ ದಾರಿ ತೋರಿಸುತ್ತಾರೆ

## ಶಿಕ್ಷಕರೇ ಬದುಕಿನ ಶಿಲ್ಪಿಗಳು



**ವಿಜಯಸಾಕ್ಷಿ ಸುದ್ದಿ, ಗದಗ**

ತಂದೆ-ತಾಯಿ ಜನ್ಮ ನೀಡಿದರೆ, ಶಿಕ್ಷಕರು ಬದುಕಿನ ದಾರಿ ತೋರಿಸಿ ವ್ಯಕ್ತಿತ್ವ ರೂಪಿಸುತ್ತಾರೆ. ವಿದ್ಯಾರ್ಥಿಗಳ ಯಶಸ್ಸಿನ ಹಿಂದೆ ಶಿಕ್ಷಕರ ನಿಸ್ವಾರ್ಥ ಪರಿಶ್ರಮ, ಶಿಸ್ತು ಹಾಗೂ ಮಾರ್ಗದರ್ಶನವಿದೆ ಎಂದು ಶ್ರೀ ಬಸವಾನಂದ ಸಾಂಸ್ಕೃತಿಕ ಸೇವಾ ಸಂಸ್ಥೆಯ ಕಾರ್ಯದರ್ಶಿ ಸದಾನಂದ ಶಾಸ್ತ್ರಿ ಹೇಳಿದರು.

ಕನ್ನೂರ ಗ್ರಾಮದಲ್ಲಿ ಸೆ. 5ರಂದು ಶ್ರೀ ಬಸವಾನಂದ ಸಾಂಸ್ಕೃತಿಕ ಸೇವಾ ಸಂಸ್ಥೆ ವತಿಯಿಂದ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿವರ್ಷ ಸೆ. 5ರಂದು ತತ್ವಜ್ಞಾನಿ, ಶಿಕ್ಷಣ ತಜ್ಞ ಹಾಗೂ ಮಾಜಿ ರಾಷ್ಟ್ರಪತಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನವನ್ನು ಶಿಕ್ಷಕರ ದಿನಾಚರಣೆಯಾಗಿ ಆಚರಿಸಲಾಗುತ್ತಿದೆ.

ಭಾರತೀಯ ತತ್ವಶಾಸ್ತ್ರವನ್ನು ಜಗತ್ತಿಗೆ ಪರಿಚಯಿಸುವಲ್ಲಿ ಅವರು ಮಹತ್ವದ ಪಾತ್ರ ವಹಿಸಿದ್ದು, 'ಭಾರತ ರತ್ನ' ಗೌರವಕ್ಕೂ ಭಾಜನರಾಗಿದ್ದರು ಎಂದರು.

> ಶಿಕ್ಷಕರು ಕೇವಲ ಪಾಠ ಹೇಳುವವರಲ್ಲ; ಅವರು ವಿದ್ಯಾರ್ಥಿಗಳ ಬದುಕಿಗೆ ದಿಕ್ಕು ತೋರಿಸುವ ಶಿಲ್ಪಿಗಳು. ಒಬ್ಬ ಶಿಕ್ಷಕ ರೂಪಿಸುವ ವ್ಯಕ್ತಿತ್ವವೇ ಸಮಾಜದ ಭವಿಷ್ಯವನ್ನು ರೂಪಿಸುತ್ತದೆ.
> – ಸದಾನಂದ ಶಾಸ್ತ್ರಿ, ಕಾರ್ಯದರ್ಶಿ, ಶ್ರೀ ಬಸವಾನಂದ ಸಾಂಸ್ಕೃತಿಕ ಸೇವಾ ಸಂಸ್ಥೆ

ಜ್ಯೋತಿಬಾ ಫುಲೆ ಹಾಗೂ ಸಾವಿತ್ರಿಬಾಯಿ ಫುಲೆ ಅವರು ಶಿಕ್ಷಣದ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸಿದ ಮಹಾನ್ ಸಾಧಕರು. ವಿರೋಧ, ಅಪಹಾಸ್ಯಗಳ ನಡುವೆಯೂ ಸಾವಿತ್ರಿಬಾಯಿ ಫುಲೆ ಅವರು ಹೆಣ್ಣುಮಕ್ಕಳ ಶಿಕ್ಷಣಕ್ಕಾಗಿ ಹೋರಾಡಿದರು ಎಂದು ಸ್ಮ-ರಿಸಿದರು.

ಇಂಡಿ ತಾಲ್ಲೂಕಿನ ಅಥರ್ಗಾ ಗ್ರಾಮದಲ್ಲಿ ಯುವಪೀಳಿಗೆಯನ್ನು ಶಿಕ್ಷಣದತ್ತ ಸೆಳೆದು ಮನೆಗೊಬ್ಬ ಶಿಕ್ಷಕರನ್ನು ರೂಪಿಸಿದ ರೇವಣಸಿದ್ದಪ್ಪ ಮಾಸ್ತರ್ ಅವರ ಸೇವೆಯನ್ನು ಪ್ರಸ್ತಾಪಿಸಿದ ಅವರು, ಇಂದಿಗೂ ಶಿಕ್ಷಕರ

## ಆದೇಶ ಹಿಂಪಡೆಯಲು ಹಿಂದಿ ಶಿಕ್ಷಕರ ಆಗ್ರಹ

# ತೃತೀಯ ಭಾಷೆ ಬದಲು ಎಐ ಬೇಡ



**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ಪ್ರೌಢಶಾಲೆಗಳಲ್ಲಿ ತೃತೀಯ ಭಾಷೆ ಬದಲಿಗೆ ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ಕೃತಕ ಬುದ್ಧಿಮತ್ತೆ (ಎಐ) ವಿಷಯ ಅಳವಡಿಸುವ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಕರ್ನಾಟಕ ರಾಜ್ಯ ಪ್ರೌಢಶಾಲಾ ಹಿಂದಿ ಭಾಷಾ ಶಿಕ್ಷಕರ ಸಂಘದ ಗದಗ ಜಿಲ್ಲಾ ಘಟಕ ಆಗ್ರಹಿಸಿದೆ.

ಸಂಘದ ಜಿಲ್ಲಾಧ್ಯಕ್ಷ ಎ.ಎಲ್. ಬಿಜಾಪೂರ ನೇತೃತ್ವದಲ್ಲಿ ಹಿಂದಿ ಶಿಕ್ಷಕರು ಶುಕ್ರವಾರ ಗದಗ ತಹಸೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

2026–27ನೇ ಸಾಲಿನಲ್ಲಿ ತೃತೀಯ ಭಾಷೆಯ ಬದಲಿಗೆ ಎಐ ಅಳವಡಿಸುವುದು ಸೂಕ್ತವಲ್ಲ. ಈ ಕಾರಣದಿಂದ ತೃತೀಯ ಭಾಷೆ ಬೋಧಿಸುತ್ತಿರುವ ಶಿಕ್ಷಕರನ್ನು ಅಗತ್ಯವಿರುವ ಹತ್ತಿರದ ಶಾಲೆಗಳಿಗೆ ನಿಯೋಜಿಸುವಂತೆ ಸಮಗ್ರ ಶಿಕ್ಷಣ ಕರ್ನಾಟಕದ ನಿರ್ದೇಶಕರು ಹೊರಡಿಸಿರುವ ಸುತ್ತೋಲೆ ಶಿಕ್ಷಕರಲ್ಲಿ ಆತಂಕ ಮೂಡಿಸಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಆದೇಶದಿಂದ ಕನ್ನಡ, ಹಿಂದಿ, ಇಂಗ್ಲಿಷ್, ಸಂಸ್ಕೃತ ಸೇರಿದಂತೆ ತೃತೀಯ ಭಾಷಾ ಶಿಕ್ಷಕರ ಸೇವಾ ಭದ್ರತೆ ಹಾಗೂ ಭವಿಷ್ಯದ ಬಗ್ಗೆ ಅನಿಶ್ಚಿತತೆ ಉಂಟಾಗಲಿದೆ. ತ್ರಿಭಾಷಾ ಸೂತ್ರವನ್ನು ಯಥಾವತ್ತಾಗಿ ಮುಂದುವರಿಸಿ, ತೃತೀಯ ಭಾಷಾ ಶಿಕ್ಷಕರನ್ನು ಬೇರೆ ಶಾಲೆಗಳಿಗೆ ನಿಯೋಜಿಸಬಾರದು ಎಂದು ಒತ್ತಾಯಿಸಿದರು.

ತೃತೀಯ ಭಾಷೆಗೆ ಬದಲಾಗಿ ಎಐ ಅಳವಡಿಸುವ ಬದಲು, ಈಗಿರುವ ಕಂಪ್ಯೂಟರ್ ಸಾಕ್ಷರತೆ ಅಥವಾ ನೀತಿ ಶಿಕ್ಷಣದ ವಾರದ ನಾಲ್ಕು ಅವಧಿಗಳನ್ನು ಬಳಸಿಕೊಂಡು ಎಐಗೆ ಹೆಚ್ಚುವರಿ ಅವಧಿ ಕಲ್ಪಿಸಬೇಕು. ಇದರಿಂದ ಭಾಷಾ ಕಲಿಕೆಯ ಜತೆಗೆ ವಿದ್ಯಾರ್ಥಿಗಳಿಗೆ ಎಐ ಶಿಕ್ಷಣವೂ ದೊರೆಯಲಿದೆ ಎಂದು ಸಂಘ ಸಲಹೆ ನೀಡಿದೆ.

> ಎಐ ಕಲಿಕೆಗೆ ನಮ್ಮ ವಿರೋಧವಿಲ್ಲ. ಆದರೆ ತೃತೀಯ ಭಾಷೆಯನ್ನೇ ತೆಗೆದುಹಾಕಿ ಎಐ ಅಳವಡಿಸುವ ಕ್ರಮದಿಂದ ಭಾಷಾ ಶಿಕ್ಷಣ ಹಾಗೂ ಶಿಕ್ಷಕರ ಸೇವಾ ಭದ್ರತೆಗೆ ಧಕ್ಕೆಯಾಗಲಿದೆ. ಸರ್ಕಾರ ಪರ್ಯಾಯ ವ್ಯವಸ್ಥೆ ರೂಪಿಸಬೇಕು.
> - ಎ.ಎಲ್. ಬಿಜಾಪೂರ, ಜಿಲ್ಲಾಧ್ಯಕ್ಷ, ಪ್ರೌಢಶಾಲಾ ಹಿಂದಿ ಭಾಷಾ ಶಿಕ್ಷಕರ ಸಂಘ

ಕಳೆದ 10 ವರ್ಷಗಳಿಂದ ಸರ್ಕಾರಿ ಶಾಲೆಗಳಲ್ಲಿ ತೃತೀಯ ಭಾಷಾ ಶಿಕ್ಷಕರ ನೇಮಕಾತಿ ನಡೆದಿಲ್ಲ. ಈ ಬಾರಿಯ ನೇಮಕಾತಿಯಲ್ಲಿಯೂ ಹಿಂದಿ ಶಿಕ್ಷಕರನ್ನು ಕೈಬಿಡಲಾಗಿದ್ದು, ಸಾವಿರಾರು ಹಿಂದಿ ಬಿ.ಎಡ್. ಪದವೀಧರರಿಗೆ ಅನ್ಯಾಯವಾಗಿದೆ. ವಯೋಮಿತಿ ಮೀರುವ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಕೂಡಲೇ ಹಿಂದಿ ಶಿಕ್ಷಕರ ನೇಮಕಾತಿಗೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ.ಎಂ. ರಾಠೋಡ, ರಾಜ್ಯ ಪ್ರತಿನಿಧಿ ಉಮೇಶ ನಿಪ್ಪಾಣಿಕರ, ನಾಗಯ್ಯ ಹಿರೇಮಠ, ಎಸ್.ಎಸ್. ಪಾಟೀಲ, ಕೆ.ಆರ್. ಬಾಕಳೆ, ಬಿ.ಸಿ. ಜೋಗಿನ, ಎಂ.ಡಿ. ನದಾಫ, ಡಾ.ಸಿ.ಎಂ. ರಫೀ, ಡಾ.ಎಚ್.ಎಂ. ಅತ್ತಾರ, ಎನ್.ಎಂ. ಕಾಗದಗಾರ, ನಾಝುಬೀನ್‌ಭಾನು ಎಂ. ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಣ್ಣ ಸುದ್ದಿಗಳು

### ನರಗುಂದ: ಅಪೌಷ್ಟಿಕತೆ ವಿರುದ್ಧ ಜಾಗೃತಿ



**ವಿಜಯಸಾಕ್ಷಿ ಸುದ್ದಿ, ನರಗುಂದ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ತಾಲೂಕು ಕಾನೂನು ಸೇವಾ ಸಮಿತಿ ವತಿಯಿಂದ ಸುರಕೋಡ ಗ್ರಾಮದ ದುರ್ಗಾದೇವಿ ದೇವಸ್ಥಾನದಲ್ಲಿ ಪೋಷಣ್ ಮಾಸಾಚರಣೆ ಹಾಗೂ ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ನೆರವೇರಿಸಲಾಯಿತು. ರಂಗೋಲಿ ಮೂಲಕ ಸರ್ಕಾರದ ವಿವಿಧ ಯೋಜನೆಗಳ ಕುರಿತು ಜಾಗೃತಿ ಮೂಡಿಸಲಾಯಿತು.

ಮೇಲ್ವಿಚಾರಕಿ ಭಾರತಿ ಕಾಲಚೆಟ್ಟಿ ಮಾತನಾಡಿ, ಅಪೌಷ್ಟಿಕತೆ ನಿವಾರಣೆಗೆ ಸರ್ಕಾರದ ಹಲವು ಕಾರ್ಯಕ್ರಮಗಳು ಸಹಕಾರಿಯಾಗಿವೆ. ವೈಯಕ್ತಿಕ ಸ್ವಚ್ಛತೆ ಹಾಗೂ ಸಮತೋಲಿತ ಆಹಾರ ಸೇವನೆಗೆ ಆದ್ಯತೆ ನೀಡಬೇಕು ಎಂದರು.

ನ್ಯಾಯವಾದಿ ಜಿ.ಸಿ. ಬೋಗಾರ ಮಾತನಾಡಿ, ಸದ್ಗುಣಗಳನ್ನು ಬೆಳೆಸಿಕೊಳ್ಳುವುದರಿಂದ ನ್ಯಾಯಾಂಗದ ಮೆಟ್ಟಿಲೇರುವ ಸಂದರ್ಭವನ್ನು ತಪ್ಪಿಸಬಹುದು. ವಿಶೇಷವಾಗಿ ಆರು ವರ್ಷದೊಳಗಿನ ಮಕ್ಕಳ ಭಾವನೆಗಳಿಗೆ ಬೆಲೆ ನೀಡುವುದು ಅಗತ್ಯ. ಸರ್ಕಾರದ ಎಲ್ಲ ಯೋಜನೆಗಳ ಸದ್ಬಳಕೆ ಮಾಡಿಕೊಳ್ಳುವುದರೊಂದಿಗೆ ಉಚಿತ ಕಾನೂನು ಸಲಹೆಯನ್ನೂ ಪಡೆಯಬೇಕು ಎಂದರು.

ಹಿರಿಯರಾದ ಆರ್.ಎಂ. ಜಾವೂರ ಮಾತನಾಡಿ, ಮಕ್ಕಳಿಗೆ ಉತ್ತಮ ಆಹಾರದ ಜತೆಗೆ ಉತ್ತಮ ಸಂಸ್ಕಾರ ಹಾಗೂ ಶಿಕ್ಷಣ ನೀಡುವಲ್ಲಿ ಅಂಗನವಾಡಿಗಳ ಪಾತ್ರ ಮಹತ್ವದ್ದಾಗಿದೆ ಎಂದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಚ್.ಎಸ್. ಚೇಟ್ರಿ, ನ್ಯಾಯವಾದಿಗಳಾದ ವಿಠ್ಠಲ ಗಾಯವಾಡ, ಪಿ.ಆರ್. ಕಿರೇಸೂರ, ಎ.ಆರ್. ನಾಯ್ಕರ್, ಪಂಚಾಯಿತಿ ಕಾರ್ಯದರ್ಶಿ ಎಂ.ಎಸ್. ಉಪವಾಸಿ, ಪೋಷಣ್ ಅಭಿಯಾನ ಸಂಯೋಜಕ ಮಂಜುನಾಥ ಗುಗ್ಗರಿ, ಅಂಗನವಾಡಿ ಕಾರ್ಯಕರ್ತೆಯರಾದ ನಿರ್ಮಲಾ ಪಾಟೀಲ, ಶ್ವೇತಾ ನವಲಗುಂದ, ಕಮಲಾ ಮಾದರ, ಆಶಾ ಮುಖಾಶಿ ಸೇರಿದಂತೆ ತಾಯಂದಿರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

### ಪದವಿ ಬದುಕಿಗೆ ಆತ್ಮವಿಶ್ವಾಸದ ಹೆಜ್ಜೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪದವಿ ಶಿಕ್ಷಣದ ಆರಂಭದಲ್ಲೇ ವಿದ್ಯಾರ್ಥಿಗಳು ತಮ್ಮ ಗುರಿ, ಸಾಮರ್ಥ್ಯ ಹಾಗೂ ಜವಾಬ್ದಾರಿಗಳನ್ನು ಅರಿತುಕೊಂಡು ಮುನ್ನಡೆಯಬೇಕು. ಪ್ರೇರಣಾ ಕಾರ್ಯಕ್ರಮದ ಆಶಯ ಮತ್ತು ಉದ್ದೇಶಗಳನ್ನು ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿ.ವಿ.ಪಿ.ಪಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಮಂಜುನಾಥ ಉಲವತ್ತಿ ಶೆಟ್ಟರ್ ಹೇಳಿದರು.

ಪಟ್ಟಣದ ಜಿ.ವಿ.ಪಿ.ಪಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪದವಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗಾಗಿ ಕರ್ನಾಟಕ ಸರ್ಕಾರದ ಕಾಲೇಜು ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಿದ್ದ ಪ್ರೇರಣಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪದವಿ ಹಂತವು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿಕೊಳ್ಳುವ ಮಹತ್ವದ ಘಟ್ಟವಾಗಿದ್ದು, ಈ ಅವಧಿಯಲ್ಲಿ ಅಗತ್ಯ ಕೌಶಲ್ಯ ಮತ್ತು ಸಾಮರ್ಥ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದರು.

ವಾಣಿಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಮುರುಗೇಶ್ ಟಿ.ಎಂ. ಅವರು ಸಾಮರ್ಥ್ಯ ಮತ್ತು ಯೋಗ್ಯತೆ ಕುರಿತು ಉಪನ್ಯಾಸ ನೀಡಿದರು. ಡಾ. ನಾಗೇಂದ್ರಪ್ಪ ಬಿ. ಪ್ರಾಸ್ತಾವಿಕವಾಗಿ ಮಾತನಾಡಿ, ಪದವಿ ಹಂತದಲ್ಲಿ ಗಳಿಸಬೇಕಾದ ಕೌಶಲ್ಯಗಳ ಕುರಿತು ವಿದ್ಯಾರ್ಥಿಗಳಿಗೆ ಇಂತಹ ಕಾರ್ಯಕ್ರಮಗಳು ಮಾರ್ಗದರ್ಶನ ನೀಡುತ್ತವೆ ಎಂದರು.

ಡಾ. ಬಡಿಗೇರ ಮೌನೇಶ್ ಸ್ವಾಗತಿಸಿದರು. ರಾಹುಲ್ ನಿರೂಪಿಸಿದರು. ಅರುಣ್ ಕುಮಾರ್, ಶರಣಪ್ಪ ಆನಂದರಾವ್, ಈಶ್ವರ್, ವೀರೇಶ್ ಬಡಿಗೇರ ಸೇರಿದಂತೆ ಬಿಎ, ಬಿಕಾಂ, ಬಿಎಸ್ಸಿ ಹಾಗೂ ಬಿಸಿಎ ಪ್ರಥಮ ವರ್ಷದ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

### ಲಯನ್ಸ್ ಶಾಲೆಗೆ ಡಿಜಿಟಲ್ ಸ್ಪರ್ಶ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ಲಯನ್ಸ್ ಕ್ಲಬ್ ವತಿಯಿಂದ ಲಯನ್ಸ್ ಎಜ್ಯುಕೇಶನ್ ಸೊಸೈಟಿಯ ಲಯನ್ಸ್ ಶಾಲೆಗೆ ಡಿಜಿಟಲ್ ಬೋರ್ಡ್ ಹಾಗೂ 10 ಚೇರ್‌ಗಳನ್ನು ದೇಣಿಗೆಯಾಗಿ ನೀಡಲಾಯಿತು.

ಕ್ಲಬ್‌ನ ಹಿಂದಿನ ಅವಧಿಯ ಪದಾಧಿಕಾರಿಗಳಾದ ನಿಕಟಪೂರ್ವ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ ಹಾಗೂ ಖಜಾಂಚಿ ರೇಣುಕಪ್ರಸಾದ ಹಿರೇಮಠ ಅವರು ತಮ್ಮ ಅಧಿಕಾರಾವಧಿಯಲ್ಲಿ ಉಳಿಸಿದ್ದ ಹಣದಿಂದ ಡಿಜಿಟಲ್ ಬೋರ್ಡ್ ಹಾಗೂ ಚೇರ್‌ಗಳನ್ನು ಖರೀದಿಸಿ, ಲಯನ್ಸ್ ಎಜ್ಯುಕೇಶನ್ ಸೊಸೈಟಿ ಚೇರ್ಮನ್ ಆನಂದ ಪೋತ್ನೀಸ್, ಕಾರ್ಯದರ್ಶಿ ಜೆ.ಸಿ. ಶಿರೋಳ ಹಾಗೂ ಖಜಾಂಚಿ ಜೆ.ಡಿ. ಉತ್ತರಕರ ಅವರಿಗೆ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಕಾರ್ಯದರ್ಶಿ ಲಿಂಗರಾಜ ತೋಟದ ಸೇರಿದಂತೆ ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನಿವೃತ್ತಿಯಲ್ಲೂ ಸೈನಿಕ ಶಿಸ್ತು ಮರೆಯದಿರಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಿವೃತ್ತ ಸೈನಿಕರು ಸೇವಾವಧಿಯಲ್ಲಿ ಪಾಲಿಸಿಕೊಂಡು ಬಂದ ಶಿಸ್ತು, ಸಮವಸ್ತ್ರ ಹಾಗೂ ಪದಕ ಧರಿಸುವ ಸಂಪ್ರದಾಯಗಳನ್ನು ನಿವೃತ್ತಿಯ ನಂತರವೂ ಗೌರವದಿಂದ ಮುಂದುವರಿಸಬೇಕು ಎಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು.

ನರೇಗಲ್ಲದಲ್ಲಿ ನಡೆದ ನಿವೃತ್ತ ಸೈನಿಕರ ಸಭೆಯಲ್ಲಿ ಮಾತನಾಡಿದ ಅವರು, ಸೈನಿಕರು ಗಳಿಸಿರುವ ಪದಕಗಳನ್ನು ಎದೆಯ ಎಡಭಾಗದಲ್ಲಿ ಧರಿಸಬೇಕು. ಸ್ಮಾರಕಗಳಿಗೆ ಪುಷ್ಪಗುಚ್ಛ ಅರ್ಪಿಸುವ ಸಂದರ್ಭ ದೊಡ್ಡ ಗಾತ್ರದ ಪದಕ ಹಾಗೂ ರಾಷ್ಟ್ರೀಯ ಹಬ್ಬಗಳಲ್ಲಿ ಸಮವಸ್ತ್ರದೊಂದಿಗೆ ಸಣ್ಣ ಗಾತ್ರದ ಪದಕ ಧರಿಸುವುದು ಸೂಕ್ತ ಎಂದರು.

ಆ. 5ರಂದು ನಡೆದ ಪ್ರಜಾಸೇವಾ ಕಾರ್ಯಕ್ರಮದಲ್ಲಿ ನಿವೃತ್ತ ಸೈನಿಕರಿಗೆ 1,200 ಚದರ ಅಡಿ ನಿವೇಶನ ನೀಡುವಂತೆ ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಗಿದೆ. ಈ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಸಂಘದ ನೋಂದಣಿ ಮುಂದಿನ ಮಾ. 30ರವರೆಗೆ ಮಾನ್ಯವಾಗಿದ್ದು, ನವೀಕರಣ ಸೇರಿದಂತೆ ಅಗತ್ಯ ಕಾರ್ಯಗಳನ್ನು ಸೆ. 30ರೊಳಗೆ ಪೂರ್ಣಗೊಳಿಸಲಾಗುವುದು. ನಿವೃತ್ತ ಸೈನಿಕರು ಹಾಗೂ ಪ್ಯಾರಾ ಮಿಲಿಟರಿ ಯೋಧರು ಸೆಪ್ಟೆಂಬರ್ ಅಂತ್ಯದೊಳಗೆ ಡಿಜಿಟಲ್ ಜೀವಂತಿಕೆ ಪ್ರಮಾಣಪತ್ರವನ್ನು ಬ್ಯಾಂಕ್‌ಗೆ ಸಲ್ಲಿಸಬೇಕು ಎಂದು ಹೇಳಿದರು.

ಸಭೆಯನ್ನುದ್ದೇಶಿಸಿ ಮಲ್ಲಿಕಾರ್ಜುನಗೌಡ ಮಲ್ಲನಗೌಡ್ರ ಮಾತನಾಡಿದರು. ಗುರುಶಾಂತಗೌಡ ಮಲ್ಲನಗೌಡ್ರ ದೇಶಭಕ್ತಿ ಗೀತೆ ಹಾಡಿದರು. ದಾದಾಸಾಬ ನದಾಫ ಸ್ವಾಗತಿಸಿದರು.

ಪ್ರಭುದೇವ ಮುಕ್ಕನಗೌಡ್ರ, ರಾಮಪ್ಪ ರೋಣದ, ಈರಪ್ಪ ದೊಡ್ಡಣ್ಣವರ, ಸಿದ್ರಾಮಪ್ಪ ಕಟ್ಟಿಮನಿ, ಬಸವರಾಜ ಯಕ್ಕುಂಡಿ, ಉಮೇಶ ಕರಮುಡಿ, ಬಸವೇಶ್ವರ ಚಿಕ್ಕೊಪ್ಪದ, ಮಂದಾಲಪ್ಪ ಸಂಗನಾಳ, ಕುಮಾರಸ್ವಾಮಿ ಕೋರಧಾನ್ಯಮಠ, ದಾವಲಸಾಬ ಕಿಲ್ಲೇದಾರ, ಈಶ್ವರಚಂದ್ರ ಬಾಗಲಿ, ಚಂದ್ರಶೇಖರ ರಟ್ಟಿ, ಶರಣಪ್ಪ ನಾಶಿಪುಡಿ, ಸುಮಿತ್ರಾಬಾಯಿ ದಳವಾಯಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಪಠ್ಯೇತರ ಚಟುವಟಿಕೆಗಳಿಗೆ ಆದ್ಯತೆ ನೀಡಿ: ಮಹೇಶ್ವರ ಸ್ವಾಮೀಜಿ

## ಪಠ್ಯದ ಜತೆಗೆ ಸಂಸ್ಕಾರವೂ ಮುಖ್ಯ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ವಿದ್ಯಾರ್ಥಿಗಳು ನಿತ್ಯದ ಪಠ್ಯದ ಜತೆಗೆ ಉತ್ತಮ ಸಂಸ್ಕಾರ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲೂ ತೊಡಗಿಸಿಕೊಳ್ಳಬೇಕು ಎಂದು ನಂದಿಪುರ ಪುಣ್ಯಕ್ಷೇತ್ರದ ಡಾ. ಮಹೇಶ್ವರ ಸ್ವಾಮೀಜಿ ಹೇಳಿದರು.

ತಾಲೂಕಿನ ನಂದಿಪುರ ಪುಣ್ಯಕ್ಷೇತ್ರದ ಶ್ರೀ ಗುರು ಚರಂತೇಶ್ವರ ಶಾಲೆಯಲ್ಲಿ ಆಯೋಜಿಸಿದ್ದ ಕೃಷ್ಣ ಜನ್ಮಾಷ್ಟಮಿ ಹಾಗೂ ವಾರದ ಸಭೆಯಲ್ಲಿ ಸಾನ್ನಿಧ್ಯ ವಹಿಸಿ, ಗಿಡಕ್ಕೆ ನೀರೆರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಸ್ಪರ್ಧಾತ್ಮಕ ಯುಗದಲ್ಲಿ ಪಠ್ಯಜ್ಞಾನಕ್ಕೆ ಮಾತ್ರ ಸೀಮಿತವಾಗದೆ ಕಲೆ, ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳು ತಮ್ಮ ಪ್ರತಿಭೆ ಬೆಳೆಸಿಕೊಳ್ಳಬೇಕು. ಇವು ಆತ್ಮವಿಶ್ವಾಸ, ಸೃಜನಶೀಲತೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗುತ್ತವೆ ಎಂದರು.

ತಾಲೂಕು ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕ ರಾಜಕುಮಾರ ನಾಯ್ಕ ಮಾತನಾಡಿ, ಪ್ರತಿಯೊಬ್ಬ ಮಗುವಿನಲ್ಲೂ ಪ್ರತಿಭೆಯಿದ್ದು, ಶಾಲಾ ಹಂತದಲ್ಲಿಯೇ ಅದನ್ನು ಗುರುತಿಸಿ ಸೂಕ್ತ ಪ್ರೋತ್ಸಾಹ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ತಾಲೂಕು ಸಂಪನ್ಮೂಲ ವ್ಯಕ್ತಿ ಪರಮೇಶ್ವರಯ್ಯ ಸೊಪ್ಪಿಮಠ, ಶಿಕ್ಷಣ ಸಂಯೋಜಕರಾದ ಶಿವಲಿಂಗಸ್ವಾಮಿ, ಗುರುಬಸವರಾಜ, ಮುಖ್ಯಗುರು ವೀರೇಶ ಬಸೆಟ್ಟಿ, ಮುಖಂಡ ಅಲ್ಲಾಭಕ್ಷಿ, ಶಾಲಾ ಆಡಳಿತಾಧಿಕಾರಿ ಕೊಟ್ರದೇವರು, ಪಾಲಕರು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

ಶ್ರೀಕೃಷ್ಣ ಹಾಗೂ ರಾಧೆಯ ವೇಷಭೂಷಣ ತೊಟ್ಟ ವಿದ್ಯಾರ್ಥಿಗಳು ಗಮನ ಸೆಳೆದರು. ಹನುಮಾನ್ ಚಾಲೀಸಾ ಪಠಣ, ನೃತ್ಯ ಹಾಗೂ ಭಾಷಣದ ಮೂಲಕ ವಿದ್ಯಾರ್ಥಿಗಳು ಪ್ರತಿಭೆ ಪ್ರದರ್ಶಿಸಿದರು. ರಾಧಾ–ಕೃಷ್ಣ ವೇಷಭೂಷಣ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ವಿದ್ಯಾರ್ಥಿನಿಯರಾದ ಮಾನಸ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಶಂಕರಗೌಡ ಸ್ವಾಗತಿಸಿದರು. ಹೆಚ್.ಎಂ. ನಚಿಕೇತ ಸ್ವಾಮಿ ವಂದಿಸಿದರು. ಶಿವಮಣಿ ನಿರ್ವಹಿಸಿದರು. ಕೃಷ್ಣನ ವೇಷಧಾರಿ ಮಹಮ್ಮದ್ ಅಪ್ಜಲ್ ಅವರಿಂದ ನಡೆದ ಬೆಣ್ಣೆ ಗಡಿಗೆ ಒಡೆಯುವ ಕಾರ್ಯಕ್ರಮ ವಿಶೇಷ ಆಕರ್ಷಣೆಯಾಗಿತ್ತು.

> ಪಠ್ಯಜ್ಞಾನ ವಿದ್ಯಾರ್ಥಿಯ ಬುದ್ಧಿಯನ್ನು ಬೆಳೆಸಿದರೆ, ಸಂಸ್ಕಾರ ಮತ್ತು ಪಠ್ಯೇತರ ಚಟುವಟಿಕೆಗಳು ಅವರ ವ್ಯಕ್ತಿತ್ವವನ್ನು ರೂಪಿಸುತ್ತವೆ. ಎರಡಕ್ಕೂ ಸಮಾನ ಆದ್ಯತೆ ದೊರೆತಾಗಲೇ ಸಮಗ್ರ ಬೆಳವಣಿಗೆ ಸಾಧ್ಯ.
> - ಡಾ. ಮಹೇಶ್ವರ ಸ್ವಾಮೀಜಿ

### ಎರಡು ಕೃತಿಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಡಾ. ಲೋಕೇಶ

## ಇತಿಹಾಸ ವರ್ತಮಾನಕ್ಕೆ ದಾರಿದೀಪ



**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಇತಿಹಾಸವೆಂದರೆ ಕೇವಲ ಗತಕಾಲದ ಘಟನೆಗಳ ದಾಖಲೆಯಲ್ಲ, ಅದು ವರ್ತಮಾನಕ್ಕೆ ದಾರಿದೀಪವಾಗಿ, ಭವಿಷ್ಯಕ್ಕೆ ಮಾರ್ಗದರ್ಶಕವಾಗುವ ಜ್ಞಾನಸಂಪತ್ತು ಎಂದು ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಚೀನ ಭಾರತದ ಇತಿಹಾಸ ಮತ್ತು ಶಾಸನವಿಜ್ಞಾನ ವಿಭಾಗದ ಮುಖ್ಯಸ್ಥ, ಹಿರಿಯ ಪ್ರಾಧ್ಯಾಪಕ ಡಾ. ಲೋಕೇಶ ಹೇಳಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥೆ ರೋಹಿಣಿ ರಾಚಣ್ಣವರ ರಚಿಸಿರುವ 'ಮಧ್ಯಯುಗೀನ ಭಾರತದ ಇತಿಹಾಸ' ಮತ್ತು 'ಆಧುನಿಕ ಭಾರತದ ಇತಿಹಾಸ' ಕೃತಿಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಇತಿಹಾಸವನ್ನು ಆಳವಾಗಿ ಅಧ್ಯಯನ ಮಾಡಿ ಆಧಾರಸಹಿತವಾಗಿ ದಾಖಲಿಸುವುದು ಸಮಾಜದ ಸಾಂಸ್ಕೃತಿಕ ಸ್ಮೃತಿಯನ್ನು ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ರೋಹಿಣಿ ರಾಚಣ್ಣವರ ಅವರ ಕೃತಿಗಳು ಇತಿಹಾಸ ಅಧ್ಯಯನ ಮಾಡುವ ವಿದ್ಯಾರ್ಥಿಗಳು ಹಾಗೂ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ಉಪಯುಕ್ತವಾಗಲಿವೆ. ಅವರು ಸಂಶೋಧನಾ ಅಧ್ಯಯನದಲ್ಲಿ ಮತ್ತಷ್ಟು ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಲೇಖಕಿ ರೋಹಿಣಿ ರಾಚಣ್ಣವರ ಮಾತನಾಡಿ, ಇತಿಹಾಸ, ಪರಂಪರೆ ಹಾಗೂ ಸಂಸ್ಕೃತಿಯ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಕೃತಿಗಳನ್ನು ರಚಿಸಲಾಗಿದೆ. ಮರೆವಿನ ಅಂಚಿನಲ್ಲಿರುವ ಚಾರಿತ್ರಿಕ ಸಂಗತಿಗಳನ್ನು ದಾಖಲಿಸಿ ವಿದ್ಯಾರ್ಥಿಗಳಿಗೆ ತಲುಪಿಸುವುದೇ ಬರವಣಿಗೆಯ ಆಶಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅಪಣ್ಣ ಹಂಜೆ ಮಾತನಾಡಿ, ನಿರಂತರ ಅಧ್ಯಯನಶೀಲರಾಗಿರುವ ರೋಹಿಣಿ ಅವರು ಓದು, ಸಂಶೋಧನೆ, ಚರ್ಚೆ ಹಾಗೂ ಬರವಣಿಗೆಯಲ್ಲಿ ತೊಡಗಿಸಿಕೊಂಡು ಉತ್ತಮ ಕೃತಿಗಳನ್ನು ರಚಿಸುತ್ತಿದ್ದಾರೆ. ಸಂಶೋಧನಾ ಕ್ಷೇತ್ರದಲ್ಲಿ ಮತ್ತಷ್ಟು ಸಾಧನೆ ಮಾಡಲಿ ಎಂದು ಹಾರೈಸಿದರು. ರೋಹಿಣಿ ಅವರ ಸಹೋದ್ಯೋಗಿಗಳಾದ ಡಾ. ಲಕ್ಷ್ಮಣ ಮುಳಗುಂದ, ಡಾ. ಸಾರಿಕಾ ಪಾಟೀಲ, ಡಾ. ಮಂಜುನಾಥ ತ್ಯಾಲಗಡಿ, ಡಾ. ನೇಮಾನಿ ಸತೀಶ, ಮಹಾನಂದಾ ಹಿರೇಮಠ, ಪವಿತ್ರಾ ಬಿ.ಸಿ., ಬಸವರಾಜ ಬಿ., ರಮೇಶ ಹುಲಕುಂದ, ಡಾ. ಶ್ರೀಶವಿಠ್ಠಲ, ಭೀಮೇಶ ಶುಭ ಹಾರೈಸಿದರು.

ಕುಮಾರಿ ಬಸಮ್ಮ ಲೆಂಕಣ್ಣವರ ಪ್ರಾರ್ಥಿಸಿದರು. ಡಾ. ಶಂಕ್ರಪ್ಪ ಬಡಿಗೇರ ಸ್ವಾಗತಿಸಿದರು. ಸಾವಿತ್ರಿ ಟಿ. ವಂದಿಸಿದರು. ಬಸವಂತಪ್ಪ ದೊಡ್ಡಮನಿ ಕಾರ್ಯಕ್ರಮ ನಿರ್ವಹಿಸಿದರು. ಪ್ರಾಧ್ಯಾಪಕರು ಹಾಗೂ ಇತಿಹಾಸ ವಿಭಾಗದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

> ಇತಿಹಾಸದ ಆಳವಾದ ಅಧ್ಯಯನವು ನಮ್ಮ ಬೇರುಗಳನ್ನು ಅರ್ಥಮಾಡಿಕೊಳ್ಳಲು ನೆರವಾಗುತ್ತದೆ. ಇಂತಹ ಕೃತಿಗಳು ವಿದ್ಯಾರ್ಥಿಗಳಲ್ಲಿ ಚಾರಿತ್ರಿಕ ಪ್ರಜ್ಞೆ ಬೆಳೆಸುವ ಜೊತೆಗೆ ಮುಂದಿನ ಅಧ್ಯಯನಕ್ಕೆ ಪ್ರೇರಣೆಯಾಗಬೇಕು.
> - ಡಾ. ಲೋಕೇಶ, ಹಿರಿಯ ಪ್ರಾಧ್ಯಾಪಕರು

### ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನಿಂದ ಶಿಕ್ಷಕರಿಗೆ ಸನ್ಮಾನ

## ಶಿಕ್ಷಕರೇ ಸುಂದರ ಸಮಾಜದ ನಿರ್ಮಾತೃಗಳು



**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕ ವೃತ್ತಿ ಕೇವಲ ಜೀವನೋಪಾಯವಲ್ಲ. ಶ್ರದ್ಧೆಯಿಂದ ಮಕ್ಕಳ ಉತ್ತಮ ಭವಿಷ್ಯ ರೂಪಿಸುವ ಗುರುತರ ಜವಾಬ್ದಾರಿಯಾಗಿದೆ. ತ್ಯಾಗಮಯ ಶಿಕ್ಷಕರ ಬದುಕು ಸದಾ ಆದರ್ಶಮಯವಾಗಿದ್ದು, ಅವರೇ ಸುಂದರ ಸಮಾಜದ ನಿರ್ಮಾತೃಗಳು ಎಂದು ಗದಗ–ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನ ಪಿಡಿಸಿ ಪ್ರೇಮಾ ಗುಳಗೌಡರ ಹೇಳಿದರು.

ಗದಗ–ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ವತಿಯಿಂದ ಗುರುವಾರ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿಕ್ಷಕರನ್ನು ಸನ್ಮಾನಿಸಿ ಅವರು ಮಾತನಾಡಿದರು.

ಶಿಕ್ಷಕರ ಮೌಲ್ಯಯುತ ಮಾರ್ಗದರ್ಶನ ಮಕ್ಕಳ ಅನುಭವ ಮತ್ತು ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ಪೂರಕವಾಗಿದೆ. ಶಿಕ್ಷಕ–ವಿದ್ಯಾರ್ಥಿ ನಡುವಿನ ಪ್ರಯತ್ನ ಹಾಗೂ ಸ್ವಪ್ರಯತ್ನದ ಬೆಸುಗೆ ಮಕ್ಕಳ ಬಾಳಿಗೆ ಬೆಳಕು ನೀಡಿ ಅವರನ್ನು ಉತ್ತಮ ನಾಗರಿಕರನ್ನಾಗಿ ರೂಪಿಸುತ್ತದೆ ಎಂದರು.

ಕ್ಲಬ್ ಅಧ್ಯಕ್ಷೆ ಮಂಜುಳಾ ಅಕ್ಕಿ ಮಾತನಾಡಿ, ಶಿಕ್ಷಣವು ಮಾನವನ ಸಾಮರ್ಥ್ಯ ವಿಕಸನಗೊಳಿಸುವ ಹಾಗೂ ಸಮಾನ, ನ್ಯಾಯಯುತ ಸಮಾಜ ನಿರ್ಮಿಸಿ ರಾಷ್ಟ್ರದ ಅಭಿವೃದ್ಧಿಗೆ ಪೂರಕವಾಗಿರುವ ಮೂಲಭೂತ ಅಂಶವಾಗಿದೆ. ಮಕ್ಕಳನ್ನು ಅಕ್ಷರದ ಮೂಲಕ ಸಶಕ್ತಗೊಳಿಸುವಲ್ಲಿ ಶಿಕ್ಷಕರು ಹಗಲಿರುಳು ಶ್ರಮಿಸುತ್ತಿದ್ದಾರೆ ಎಂದರು.

ಕ್ಲಬ್ ಕಾರ್ಯದರ್ಶಿ ಪೂಜಾ ಭೂಮಾ ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಜಿಲ್ಲೆಯ ವಿವಿಧ ತಾಲೂಕುಗಳಿಂದ ಉತ್ತಮ ಶಿಕ್ಷಕರನ್ನು ಆಯ್ಕೆ ಮಾಡಲಾಗಿದ್ದು, ಎಲೆಮರೆಯ ಕಾಯಿಯಂತೆ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಸೇವೆ ಅನುಪಮವಾಗಿದೆ ಎಂದರು.

ಕ್ಲಬ್ ವತಿಯಿಂದ ಸರ್ಕಾರಿ ಪ್ರಾಥಮಿಕ ಶಾಲೆ ಸಿಂಗಟರಾಯನಕೇರಿ ತಾಂಡಾದ ಸರೋಜಾ ಬಂಡಿ, ಸ.ಪ್ರಾ.ಶಾಲೆ ನಂ. 2ರ ಕಮಲಾಕ್ಷಿ ರೇಷ್ಮೆ, ಎಕಲಾಸಪುರದ ಸುರಯ್ಯ ನದಾಫ್, ಸ.ಪ್ರಾ.ಶಾಲೆ ನಂ. 13ರ ಸುಧಾ ಬೇವಿನಮಟ್ಟಿ, ಉರ್ದು ಪ್ರಾ.ಶಾಲೆ ನಂ. 4ರ ಎನ್.ಎಚ್. ಜಕ್ಕಲಿ, ಎಚ್.ಪಿ.ಎಸ್. ಗಂಗಿಮಡಿಯ ರೇಣವ್ವ ಹಾದಿಮನಿ, ಪಿಪಿಜಿ ಪ್ರಾ.ಶಾಲೆಯ ಉಡಚಮ್ಮ ವಾಲ್ಮೀಕಿ, ಎಚ್.ಪಿ.ಎಸ್. ನಂ. 8ರ ಎಸ್.ಎಚ್. ಮೊರಬರಡ್ಡಿ ಹಾಗೂ ಎಲ್.ಪಿ.ಯು.ಎಸ್. ಕಣಗಿನಹಾಳದ ರವಿ ಕಟ್ಟಿಮನಿ ಅವರನ್ನು ಪ್ರಶಸ್ತಿ ಪತ್ರದೊಂದಿಗೆ ಸನ್ಮಾನಿಸಲಾಯಿತು.

> ಶಿಕ್ಷಕರ ಮಾರ್ಗದರ್ಶನವೇ ಮಕ್ಕಳ ಬದುಕಿಗೆ ಬೆಳಕು ನೀಡಿ, ಅವರನ್ನು ಉತ್ತಮ ನಾಗರಿಕರನ್ನಾಗಿ ರೂಪಿಸುವ ಶಕ್ತಿ. ಶಿಕ್ಷಕರ ಸೇವೆ ಸಮಾಜದ ಭವಿಷ್ಯ ನಿರ್ಮಿಸುವ ಮಹತ್ವದ ಕಾರ್ಯ.
> - ಪ್ರೇಮಾ ಗುಳಗೌಡರ, ಪಿಡಿಸಿ, ಇನ್ನರ್‌ವ್ಹೀಲ್ ಕ್ಲಬ್

## ಸಣ್ಣ ಸುದ್ದಿಗಳು

### ಧಾರ್ಮಿಕ ಆಚರಣೆ, ಸತ್ಸಂಗದಿಂದ ಬದುಕಿಗೆ ಮೌಲ್ಯ: ಮುಕ್ತಿಮಂದಿರ ಶ್ರೀಗಳು

# ಶ್ರಾವಣ ಮಾಸ ಸಂಸ್ಕಾರದ ಪರ್ವ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಸ್ಲಿಮರಿಗೆ ರಂಜಾನ್ ಪವಿತ್ರ ಮಾಸವಾಗಿರುವಂತೆ ಹಿಂದೂಗಳಿಗೂ ಶ್ರಾವಣ ಮಾಸ ಅತ್ಯಂತ ಪವಿತ್ರವಾಗಿದೆ. ಶ್ರಾವಣದಲ್ಲಿ ಧಾರ್ಮಿಕ ಆಚರಣೆ, ಪುರಾಣ ಪ್ರವಚನ ಹಾಗೂ ಸತ್ಸಂಗಗಳಲ್ಲಿ ಪಾಲ್ಗೊಳ್ಳುವುದರಿಂದ ಧಾರ್ಮಿಕ ಪ್ರಜ್ಞೆ ಮತ್ತು ಸಂಸ್ಕಾರ ವೃದ್ಧಿಯಾಗುತ್ತದೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಂಗಣದಲ್ಲಿ ಶ್ರಾವಣ ಮಾಸದ ಅಂಗವಾಗಿ ಒಂದು ತಿಂಗಳ ಕಾಲ ಆಯೋಜಿಸಿದ್ದ ಪುಟ್ಟರಾಜ ಗವಾಯಿಗಳಿಂದ ರಚಿತ ಶ್ರೀ ವೀರಭದ್ರೇಶ್ವರ ಪುರಾಣದ ಮಂಗಲೋತ್ಸವದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಪುರಾಣ ಪ್ರವಚನದ ಉದ್ದೇಶದಿಂದ ಆರಂಭವಾದ ತಾಯಿ ಪಾರ್ವತಿ ಮಕ್ಕಳ ಬಳಗ ಇಂದು ಹೆಮ್ಮರವಾಗಿ ಬೆಳೆದಿದೆ. ಸಂಘ-ಸಂಸ್ಥೆ ಸ್ಥಾಪಿಸುವುದು ಸುಲಭವಾದರೂ ಅವುಗಳನ್ನು ನಿರಂತರವಾಗಿ ಮುನ್ನಡೆಸುವುದು ಕಷ್ಟ. ಇಂತಹ ಸಂದರ್ಭದಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸುತ್ತಿರುವ ಬಳಗದ ಕಾರ್ಯ ಶ್ಲಾಘನೀಯ ಎಂದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಕ್ತಿಮಂದಿರ ಕ್ಷೇತ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸಂಸ್ಥೆಯ ಪರವಾಗಿ ಅನುದಾನ ಕೋರಿ ಮನವಿ ಸಲ್ಲಿಸಲಾಗಿದೆ. ಗುರುಭಕ್ತರಾಗಿರುವ ಅವರು ತಮ್ಮ ಕಚೇರಿಯಲ್ಲಿ ಲಿಂ. ಜಗದ್ಗುರು ಗಂಗಾಧರ ಸ್ವಾಮಿಗಳ ಭಾವಚಿತ್ರ ಇರಿಸಿಕೊಂಡಿದ್ದಾರೆ.

ಅಕ್ಟೋಬರ್‌ನಲ್ಲಿ ಮುಕ್ತಿಮಂದಿರ ಸಭಾಭವನ ಉದ್ಘಾಟನೆಗೆ ಅವರು ಆಗಮಿಸುವ ನಿರೀಕ್ಷೆಯಿದ್ದು, ಈ ಸಂದರ್ಭದಲ್ಲಿ ಪ್ರತಿಷ್ಠಿತ ವೀರಗಂಗಾಧರ ಪ್ರಶಸ್ತಿ ಪ್ರದಾನ ಮಾಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷೆ ಸುವರ್ಣಬಾಯಿ ಬಹದ್ದೂರ ದೇಸಾಯಿ ವಹಿಸಿದ್ದರು. ಉಪಾಧ್ಯಕ್ಷೆ ಜಯಲಕ್ಷ್ಮಿ ಗಡ್ಡದೇವರಮಠ, ಕಾರ್ಯದರ್ಶಿ ಜಯಲಕ್ಷ್ಮಿ ಗಡ್ಡದೇವರಮಠ, ರೋಹಿಣಿಬಾಯಿ ಬಹದ್ದೂರ ದೇಸಾಯಿ, ಶಾರಕ್ಕ ಮಹಾಂತಶೆಟ್ಟರ ಹಾಗೂ ಪುರಾಣ ಪ್ರವಚನಕಾರ ಪ್ರಭುಗೌಡ ಯಕ್ಕಿಕೊಪ್ಪ ವೇದಿಕೆಯಲ್ಲಿದ್ದರು.

ಜೆ.ಡಿ. ಲಮಾಣಿ, ರೂಪಾ ನವಲೆ, ಸೋಮಯ್ಯ ವಿರಕ್ತಮಠ, ಜಗದೀಶ ಶಿರಹಟ್ಟಿ, ರಮೇಶ ನವಲೆ, ಪರಮೇಶ ತಡಹಾಳ, ಎಸ್.ಎನ್. ಮಳಲಿ, ಹನುಮಂತಪ್ಪ ಭಜಂತ್ರಿ, ಎ.ಎನ್. ನಾವಿ ಸೇರಿದಂತೆ ಸಂಸ್ಥೆಯ ಉಪನ್ಯಾಸಕರು, ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ವೈಷ್ಣವಿ ಕ್ಷತ್ರಿ ಪ್ರಾರ್ಥಿಸಿದರು. ಸುಚಿತ್ರ ಜಗದಮನಿ ಹಾಗೂ ಶೀಲಾ ತಳವಾರ ಸ್ವಾಗತಿಸಿದರು. ಎಂ.ಸಿ. ಹಿರೇಮಠ ನಿರೂಪಿಸಿದರು.

> ಧಾರ್ಮಿಕ ಕಾರ್ಯಕ್ರಮಗಳು ಕೇವಲ ಆಚರಣೆಗೆ ಸೀಮಿತವಾಗದೆ, ನಮ್ಮ ಬದುಕಿನಲ್ಲಿ ಸದಾಚಾರ, ಶಿಸ್ತು ಮತ್ತು ಸಂಸ್ಕಾರ ಬೆಳೆಸುವಂತಿರಬೇಕು. ಪುರಾಣ ಮತ್ತು ಸತ್ಸಂಗದ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡಾಗಲೇ ಅದರ ನಿಜವಾದ ಫಲ ದೊರೆಯುತ್ತದೆ.
> – ಶ್ರೀ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು

### ಶಿಕ್ಷಕರೊಂದಿಗೆ ನಿರಂತರ ಸಂಪರ್ಕದಲ್ಲಿರಿ: ಕೆ.ಪಿ. ಸಾಲಿಮಠ

# ಮಕ್ಕಳ ಕಲಿಕೆಗೆ ಪಾಲಕರ ನಿಗಾ ಅಗತ್ಯ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಗುವಿನ ಕೈ ಹಿಡಿದು ಶಾಲೆಗೆ ಕಳುಹಿಸುವುದಷ್ಟೇ ಪಾಲಕರ ಜವಾಬ್ದಾರಿಯಲ್ಲ. ಮಕ್ಕಳ ಕನಸುಗಳಿಗೆ ದಾರಿ ತೋರಿಸುವುದು, ನಡವಳಿಕೆ ಮತ್ತು ಅಭ್ಯಾಸ ಗಮನಿಸುವುದು ಹಾಗೂ ಕಲಿಕೆಯ ಹಾದಿಯಲ್ಲಿ ಶಿಕ್ಷಕರೊಂದಿಗೆ ಹೆಜ್ಜೆ ಹಾಕುವುದು ಕೂಡ ಪಾಲಕರ ಕರ್ತವ್ಯ ಎಂದು ಡಯಟ್‌ನ ನಿವೃತ್ತ ಉಪನ್ಯಾಸಕ ಕೆ.ಪಿ. ಸಾಲಿಮಠ ಹೇಳಿದರು. ಪಟ್ಟಣದ ಶ್ರೀ ಕೃಷ್ಣಾಜಿ ರಂಗರಾವ್ ಕುಲಕರ್ಣಿ ಸರ್ಕಾರಿ ಪ್ರೌಢಶಾಲೆಯಲ್ಲಿ ಇತ್ತೀಚೆಗೆ ಆಯೋಜಿಸಿದ್ದ ಪಾಲಕರ ಸಭೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳ ಕಲಿಕಾ ಪ್ರಗತಿ ಶಾಲೆಯ ನಾಲ್ಕು ಗೋಡೆಗಳಿಗೆ ಸೀಮಿತವಾಗುವುದಿಲ್ಲ.

ಮನೆಯಲ್ಲಿ ಪಾಲಕರು ನೀಡುವ ಸಮಯ, ಪ್ರೋತ್ಸಾಹ ಹಾಗೂ ಕಲಿಕೆಗೆ ಕಲ್ಪಿಸುವ ವಾತಾವರಣವೂ ಮಹತ್ವದ್ದು. ಪಾಲಕರು ಮಕ್ಕಳ ಗೃಹಪಾಠ, ಗೈರುಹಾಜರಿ, ನಡವಳಿಕೆ ಹಾಗೂ ಕಲಿಕೆಯಲ್ಲಿನ ಏರುಪೇರುಗಳನ್ನು ಗಮನಿಸಿ, ಸಮಸ್ಯೆ ಕಂಡುಬಂದಾಗ ಶಿಕ್ಷಕರೊಂದಿಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಸಲಹೆ ನೀಡಿದರು.

ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸರ್ಕಾರ, ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳು ನೀಡುತ್ತಿರುವ ಸಹಕಾರ ಶಿಕ್ಷಣದ ಮೇಲಿನ ಸಮಾಜದ ಕಾಳಜಿಗೆ ಸಾಕ್ಷಿಯಾಗಿದೆ. ಶ್ರಾವಣ ಮಾಸದಲ್ಲಿ ದಾನಿಗಳ ಸಹಕಾರದಿಂದ ನಡೆದ ಒಂದು ತಿಂಗಳ 'ಅಮೃತ ಭೋಜನ' ಕಾರ್ಯಕ್ರಮವೂ ಇದಕ್ಕೆ ಉದಾಹರಣೆ. ಸಮಾಜದ ಸೌಲಭ್ಯ ಮತ್ತು ಸಹಕಾರವನ್ನು ಮಕ್ಕಳು ಸದುಪಯೋಗಪಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಮುಖ್ಯ ಶಿಕ್ಷಕ ಎಸ್.ಬಿ. ನಿಡಗುಂದಿ ಮಾತನಾಡಿ, ಕಳೆದ ಶೈಕ್ಷಣಿಕ ವರ್ಷದಲ್ಲಿ ನಿಡಗುಂದಿ, ನರೇಗಲ್ಲ ಹಾಗೂ ಅಬ್ಬಿಗೇರಿ ಕ್ಲಸ್ಟರ್‌ನ 15 ಶಾಲೆಗಳ ಪೈಕಿ ತಮ್ಮ ಶಾಲೆ ಶೇ.100ರಷ್ಟು ಎಸ್‌ಎಸ್‌ಎಲ್‌ಸಿ ಫಲಿತಾಂಶ ದಾಖಲಿಸಿದ ಏಕೈಕ ಶಾಲೆಯಾಗಿದೆ.

ಈ ಸಾಧನೆಯನ್ನು ಮುಂದುವರಿಸಿ ಪ್ರಸಕ್ತ ಸಾಲಿನಲ್ಲೂ ಶೇ.100ರಷ್ಟು ಫಲಿತಾಂಶ ಸಾಧಿಸುವ ಗುರಿ ಹೊಂದಲಾಗಿದೆ. ವಿದ್ಯಾರ್ಥಿಗಳು ಶ್ರದ್ಧೆ, ಶಿಸ್ತು ಹಾಗೂ ನಿರಂತರ ಪರಿಶ್ರಮದಿಂದ ಅಭ್ಯಾಸ ಮಾಡಿ ಶಾಲೆ ಮತ್ತು ಪಾಲಕರಿಗೆ ಕೀರ್ತಿ ತರಬೇಕು ಎಂದರು. ಸಭೆಯಲ್ಲಿ ಪಾಲಕರು, ವಿದ್ಯಾರ್ಥಿಗಳು ಹಾಗೂ ಶಿಕ್ಷಕರೊಂದಿಗೆ ಕೆ.ಪಿ. ಸಾಲಿಮಠ ಸಂವಾದ ನಡೆಸಿ, ಮಕ್ಕಳ ಕಲಿಕಾ ಪ್ರಗತಿ, ಗೃಹಪಾಠ, ಗೈರುಹಾಜರಿ ಮತ್ತು ನಡವಳಿಕೆ ಕುರಿತು ಚರ್ಚಿಸಿದರು. 50ಕ್ಕೂ ಹೆಚ್ಚು ಪಾಲಕರು ಭಾಗವಹಿಸಿದ್ದರು.

> ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶಾಲೆ ಮತ್ತು ಮನೆ ಪರಸ್ಪರ ಕೈಜೋಡಿಸಬೇಕು. ಪಾಲಕರು ಮಕ್ಕಳಿಗೆ ಸಮಯ ನೀಡಿ, ಶಿಕ್ಷಕರೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾಗ ಅವರ ಕಲಿಕೆಯಲ್ಲಿ ಎದುರಾಗುವ ಸಮಸ್ಯೆಗಳನ್ನು ಆರಂಭದಲ್ಲೇ ಗುರುತಿಸಿ ಪರಿಹರಿಸಲು ಸಾಧ್ಯ.
> – ಕೆ.ಪಿ. ಸಾಲಿಮಠ, ನಿವೃತ್ತ ಉಪನ್ಯಾಸಕ, ಡಯಟ್

### ಆರ್.ವಾಯ್.ಎಸ್. ಸಂಘಕ್ಕೆ ಪ್ರಥಮ ಸ್ಥಾನ, ಗಂಗಿಮಡಿ ಯುವಕರಿಗೆ ದ್ವಿತೀಯ

# ಗಡಿಗಿ ಒಡೆಯಲು ಗೋವಿಂದರ ರೋಚಕ ಸಾಹಸ

**ವಿಜಯಸಾಕ್ಷಿ ಸುದ್ದಿ, ಗದಗ**



ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ನಗರದ ಒಕ್ಕಲಗೇರಿ ಓಣಿಯ ಶ್ರೀ ರಾಚೋಟೇಶ್ವರ ದೇವಸ್ಥಾನದ ಆವರಣದಲ್ಲಿ ನಡೆದ ಮೊಸರು ಗಡಿಗಿ ಒಡೆಯುವ ರೋಚಕ ಸ್ಪರ್ಧೆ ನೂರಾರು ಜನರ ಗಮನ ಸೆಳೆಯಿತು. ಯುವಕರ ಸಾಹಸ, ತಂಡಸ್ಫೂರ್ತಿ ಹಾಗೂ ಭಕ್ತರ ಹರ್ಷೋದ್ಗಾರದ ನಡುವೆ ನಡೆದ ಸ್ಪರ್ಧೆಯಲ್ಲಿ ಆರ್.ವಾಯ್.ಎಸ್. ಸಂಘ ಪ್ರಥಮ ಸ್ಥಾನ ಪಡೆದು ಸಂಭ್ರಮಿಸಿತು.

ಪ್ರತಿ ವರ್ಷದಂತೆ ಈ ವರ್ಷವೂ ಆಯೋಜಿಸಿದ್ದ ಸಾಹಸಮಯ ಸ್ಪರ್ಧೆಯಲ್ಲಿ ಒಟ್ಟು ಆರು ತಂಡಗಳು ಪಾಲ್ಗೊಂಡಿದ್ದವು. ಪ್ರತಿ ತಂಡದಲ್ಲಿ 13 ಆಟಗಾರರಿದ್ದು, ಒಬ್ಬರ ಮೇಲೊಬ್ಬರು ನಿಂತು ಮಾನವ ಗೋಪುರ ನಿರ್ಮಿಸಿ, ಮೇಲಿದ್ದ ಆಟಗಾರ ಗಡಿಗಿ ಒಡೆಯುವ ದೃಶ್ಯ ರೋಮಾಂಚನ ಮೂಡಿಸಿತು. ಗಂಗಿಮಡಿ ಯುವಕರ ತಂಡ ದ್ವಿತೀಯ ಹಾಗೂ ಖಾನತೋಟದ ಯುವಕರ ತಂಡ ತೃತೀಯ ಸ್ಥಾನ ಗಳಿಸಿತು.

ಶ್ರೀಕೃಷ್ಣನ ಬಾಲಲೀಲೆಯನ್ನು ಸ್ಮರಿಸುವ ಈ ಆಚರಣೆಯು ಧಾರ್ಮಿಕ ಹಾಗೂ ಸಾಮಾಜಿಕ ಮಹತ್ವ ಹೊಂದಿದೆ. ಬಾಲಕೃಷ್ಣನು ಗೆಳೆಯರೊಂದಿಗೆ ಸೇರಿ ಗೋಪಿಕೆಯರ ಮನೆಯಲ್ಲಿ ಎತ್ತರದಲ್ಲಿ ಕಟ್ಟಿದ್ದ ಮೊಸರು, ಬೆಣ್ಣೆ ಮತ್ತು ಹಾಲಿನ ಗಡಿಗೆಗಳನ್ನು ಕದ್ದು ತಿನ್ನುತ್ತಿದ್ದ ಪ್ರಸಂಗವನ್ನು ನೆನಪಿಸುವ ಉದ್ದೇಶದಿಂದ ಯುವಕರು ಮಾನವ ಗೋಪುರ ನಿರ್ಮಿಸಿ ಗಡಿಗಿ ಒಡೆಯುತ್ತಾರೆ.

ನವೀನ ನಾಲ್ವಾಡ ಮಾತನಾಡಿ, ಗಡಿಗಿ ಒಡೆಯುವ ಯುವಕರನ್ನು 'ಗೋವಿಂದರು' ಎಂದು ಕರೆಯಲಾಗುತ್ತದೆ. ಒಬ್ಬರ ಮೇಲೊಬ್ಬರು ನಿಂತು ಮಾನವ ಗೋಪುರ ನಿರ್ಮಿಸಿ ಗಡಿಗಿ ಒಡೆಯುವ ಮೂಲಕ ಕೃಷ್ಣನ ಬಾಲಲೀಲೆಯನ್ನು ಸ್ಮರಿಸಲಾಗುತ್ತದೆ.

### ಟ್ರೋಫಿ ಜತೆಗೆ ನಗದು ಬಹುಮಾನ

ಪ್ರಥಮ ಸ್ಥಾನ ಪಡೆದ ಆರ್.ವಾಯ್.ಎಸ್. ಸಂಘಕ್ಕೆ ₹10,000 ನಗದು ಹಾಗೂ ಟ್ರೋಫಿ, ದ್ವಿತೀಯ ಸ್ಥಾನ ಪಡೆದ ಗಂಗಿಮಡಿ ಯುವಕರ ತಂಡಕ್ಕೆ ₹5,000 ನಗದು ಹಾಗೂ ಟ್ರೋಫಿ, ತೃತೀಯ ಸ್ಥಾನ ಪಡೆದ ಖಾನತೋಟದ ಯುವಕರ ತಂಡಕ್ಕೆ ₹2,500 ನಗದು ಹಾಗೂ ಟ್ರೋಫಿ ನೀಡಿ ಗೌರವಿಸಲಾಯಿತು.

> ಗಡಿಗಿ ಒಡೆಯುವ ಕಾರ್ಯಕ್ರಮ ಶ್ರೀಕೃಷ್ಣನ ಬಾಲಲೀಲೆಯನ್ನು ಸ್ಮರಿಸುವ ಜತೆಗೆ ಯುವಕರಲ್ಲಿನ ಸಾಹಸ, ಒಗ್ಗಟ್ಟು ಮತ್ತು ತಂಡಸ್ಫೂರ್ತಿಯನ್ನು ಅನಾವರಣಗೊಳಿಸುತ್ತದೆ. ಇಂತಹ ಸಾಂಪ್ರದಾಯಿಕ ಆಚರಣೆಗಳು ಹಬ್ಬದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸುತ್ತವೆ.
> – ಶ್ರೀಧರ್ ವಜ್ರಬಂಡಿ

ಆರು ತಂಡಗಳ ಆಟಗಾರರು ಉತ್ಸಾಹದಿಂದ ಪಾಲ್ಗೊಂಡು ಭಕ್ತರನ್ನು ರಂಜಿಸಿದರು ಎಂದರು. ಈ ಸಂದರ್ಭದಲ್ಲಿ ಮುಖಂಡರಾದ ರಾಜು ಖಾನಪ್ಪನವರ, ಸಿದ್ದು ಸಂಗನಾಳ, ವೀರಣ್ಣ ಮೇಟಿ, ಮಂಜು ಅಂತರಗೊಂಡ, ಚೇತನ್ ಅಬ್ಬಿಗೇರಿ, ಮಲ್ಲು ಮಹಾಂತಶೆಟ್ಟರ, ಮಂಜುನಾಥ ಕುರ್ತಕೋಟಿ, ಈಶ್ವರ ಹಳ್ಳಿ, ಕಿರಣ್ ಕಮತರ, ಪರಶುರಾಮ ಹಳ್ಳದ, ನರಸಪ್ಪ ತುಕ್ಕಪ್ಪನವರ, ಬಸವರಾಜ ಹುಬ್ಬಳ್ಳಿ, ನಾಗರಾಜ ಮೇಣಸಗಿ, ವೀರೂಪಾಕ್ಷಪ್ಪ ಹೆಬ್ಬಳ್ಳಿ, ಮಹೇಶ ರೋಖಡೆ, ಸುರೇಶ ಹೆಬಸೂರ, ಹೇಮಂತ್ ಗಿಡ್ಡಹನಮಣ್ಣವರ, ಆನಂದ ಗವಲಿ, ಪಂಚಾಕ್ಷರಿ ಅಂಗಡಿ, ಸೋಮು ಮುಳಗುಂದ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ವಾರದಲ್ಲಿ ಒಂದು ದಿನ ಮೊಬೈಲ್ ಮುಟ್ಟದಿರುವುದೇ ನಿಜವಾದ ಉಪವಾಸ

# ಮೊಬೈಲ್ ವ್ಯಸನ ಮುಂದಿನ ಪೀಳಿಗೆಗೆ ಅಪಾಯಕಾರಿ



**ವಿಜಯಸಾಕ್ಷಿ ಸುದ್ದಿ, ಗದಗ**

ಒಂದು ಕಾಲದಲ್ಲಿ ಕುಡಿತದ ಚಟ ಬಿಡಿಸಲು ನಿಮ್ಹಾನ್ಸ್‌ಗೆ ಹೋಗುತ್ತಿದ್ದವರು, ಇಂದು ಮೊಬೈಲ್ ಚಟ ಬಿಡಿಸಲು ಅಲ್ಲಿಗೆ ಹೋಗುವ ಸ್ಥಿತಿ ಬಂದಿದೆ. ಮಕ್ಕಳ ಕೈಗಳು ನಡುಗುತ್ತಿದ್ದು, ನಿದ್ರೆಯಲ್ಲೂ ಮೊಬೈಲ್ ಹುಡುಕುವಂತಾಗಿದೆ. ಇದು ಮುಂದಿನ ಪೀಳಿಗೆಯನ್ನೇ ನುಂಗುವ ಮಾನಸಿಕ ಅಸ್ವಸ್ಥತೆಯ ಸಾಧನವಾಗುತ್ತಿದೆ ಎಂದು ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ಕಳವಳ ವ್ಯಕ್ತಪಡಿಸಿದರು.

ಗದಗಿನ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದಲ್ಲಿ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ ಶುಕ್ರವಾರ ಆಯೋಜಿಸಿದ್ದ 'ಜೀವನ ದರ್ಶನ' 62ನೇ ಮಾಲಿಕೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಮೊಬೈಲ್ ಬಳಕೆಯಿಂದ ಗಂಡ-ಹೆಂಡತಿ, ತಂದೆ-ತಾಯಿ ಮತ್ತು ಮಕ್ಕಳ ನಡುವೆ ಮಾತುಕತೆ, ಚರ್ಚೆ ಕಡಿಮೆಯಾಗಿದೆ. ಪರಸ್ಪರ ಪ್ರೀತಿ, ವಿಶ್ವಾಸದ ಬದಲು ದ್ವೇಷ, ಅಸೂಯೆ, ಮತ್ಸರ ಹೆಚ್ಚುತ್ತಿದೆ. ಆದ್ದರಿಂದ ವಾರದಲ್ಲಿ ಒಂದು ದಿನ ಮೊಬೈಲ್ ಮುಟ್ಟದೇ ಕುಟುಂಬದೊಂದಿಗೆ ಸಮಯ ಕಳೆಯಬೇಕು. ಮೊಬೈಲ್ ಹಿತಮಿತ ಬಳಕೆಯಾಗಬೇಕು ಎಂದರು. ಶ್ರಾವಣ ಮಾಸದ ಮಹತ್ವ ವಿವರಿಸಿದ ಅವರು, ಆಸೆ, ಕ್ರೋಧ, ಲೋಭ, ಮೋಹ, ಮದ, ಮತ್ಸರ, ಅಹಂಕಾರದಂತಹ ದುರ್ಗುಣಗಳಿಂದ ದೂರವಿದ್ದು ಸದ್ಗುಣಗಳನ್ನು ಬೆಳೆಸಿಕೊಳ್ಳಬೇಕು. ದುರ್ಗುಣಗಳಿದ್ದರೆ ಜೀವನ ನರಕ, ಸದ್ಗುಣಗಳಿದ್ದರೆ ಜೀವನವೇ ಸ್ವರ್ಗ. ಇದೇ ನಿಜವಾದ ಜೀವನ ದರ್ಶನ ಎಂದರು. ನಿವೃತ್ತ ಪ್ರಾಚಾರ್ಯ ಡಾ. ಎಫ್.ಸಿ. ಹೊಸೂರು ಮಾತನಾಡಿ, ಪಾಲಕರು ಮಕ್ಕಳಿಗೆ ಸಂಸ್ಕಾರ, ಸಂಸ್ಕೃತಿ ಹಾಗೂ ಸತ್ಯದ ಹಾದಿಯ ತಿಳುವಳಿಕೆ ನೀಡಬೇಕು. ಮಕ್ಕಳ ಕೈಗೆ ಸ್ಮಾರ್ಟ್‌ಫೋನ್ ಬದಲು ಉತ್ತಮ ಪುಸ್ತಕ ನೀಡಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಎ.ಟಿ. ನರೇಗಲ್ ಸಮಿತಿಯ ಕಾರ್ಯಚಟುವಟಿಕೆ ವಿವರಿಸಿದರು. ಗಣ್ಯರಾದ ಡಾ. ಎಫ್.ಸಿ. ಹೊಸೂರು, ಬಸವರಾಜ ಕಮ್ಮಾರ, ಈರಣ್ಣ ಕಾಂಬಳೆ ಅವರನ್ನು ಸನ್ಮಾನಿಸಲಾಯಿತು. ಆರ್.ಆರ್. ಕಾಶಪ್ಪನವರ, ಸುದರ್ಶನ ಹಾನಗಲ್ಲ, ಎಸ್.ಎಸ್. ಪಾಳೇಗಾರ, ಆರ್.ಬಿ. ಅಂದಪ್ಪನವರ, ವ್ಹಿ.ಆರ್. ಗೊಬ್ಬರಗುಂಪಿ, ಸಾಗರ ಬಿಂಗಿ ಸೇರಿದಂತೆ ಗಣ್ಯರು ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೂ ಮುನ್ನ ಕಾಶೀ ವಿಶ್ವನಾಥನ ಪಾಲಕಿ ಸೇವೆ ಶ್ರದ್ಧಾಭಕ್ತಿಯಿಂದ ನಡೆಯಿತು.

> ಮೊಬೈಲ್ ನಮ್ಮ ಬದುಕನ್ನು ಸುಲಭಗೊಳಿಸಬೇಕೇ ಹೊರತು, ಬದುಕನ್ನೇ ಮೊಬೈಲ್‌ಗೆ ಒಪ್ಪಿಸುವಂತಾಗ ಬಾರದು. ಮಕ್ಕಳ ಭವಿಷ್ಯಕ್ಕಾಗಿ ಪಾಲಕರು ಮೊಬೈಲ್ ಬಳಕೆಗೆ ಮಿತಿ ಹಾಕಲೇಬೇಕು.
> – ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು

### ಮಕ್ಕಳ ಆಸಕ್ತಿ ಗುರುತಿಸಿ ಪ್ರೋತ್ಸಾಹಿಸಿ: ವೀಣಾ ಪಾಟೀಲ

# ನಾಟ್ಯ ಅಕಾಡೆಮಿಗೆ ದಶಕದ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**

ನಿಮಿಷಾಂಬ ಜ್ಯೋತಿಶ್ರೀ ನಾಟ್ಯ ಅಕಾಡೆಮಿ ಹತ್ತು ವರ್ಷ ಪೂರೈಸಿರುವುದು ಹೆಮ್ಮೆಯ ಸಂಗತಿ. ಇದರ ಹಿಂದೆ ನಿರಂತರ ಪರಿಶ್ರಮ ಮತ್ತು ಸಾಧನೆಯಿದೆ ಎಂದು ಲೇಖಕಿ ಹಾಗೂ ಮುಂಡರಗಿಯ ಚೈತನ್ಯ ಶಿಕ್ಷಣ ಸಂಸ್ಥೆ ನಿರ್ದೇಶಕಿ ವೀಣಾ ಪಾಟೀಲ ಹೇಳಿದರು.

ನಗರದ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಇತ್ತೀಚೆಗೆ ನಡೆದ ಅಕಾಡೆಮಿಯ ದಶಕದ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳಲ್ಲಿರುವ ಆಸಕ್ತಿ ಹಾಗೂ ಪ್ರತಿಭೆಯನ್ನು ಗುರುತಿಸಿ ಪಾಲಕರು ಪ್ರೋತ್ಸಾಹಿಸಬೇಕು.

ಚಿಕ್ಕ ವಯಸ್ಸಿನಲ್ಲಿ ಕಲಿಸುವ ವಿಷಯಗಳನ್ನು ಮಕ್ಕಳು ಸುಲಭ ವಾಗಿ ಗ್ರಹಿಸುತ್ತಾರೆ. ಅವರ ಆಸಕ್ತಿಗೆ ಅನುಗು ಣವಾಗಿ ಕ್ಷೇತ್ರ ಆಯ್ಕೆ ಮಾಡಿಕೊಳ್ಳಲು ಪಾಲಕರು ಸಹಕಾರ ನೀಡಬೇಕು ಎಂದರು.

ಸ್ಪರ್ಶ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಡಾ. ಪ್ರಭಾ ದೇಸಾಯಿ ಮಾತನಾಡಿ, ಒಂದು ವಿದ್ಯಾರ್ಥಿಯಿಂದ ಆರಂಭವಾದ ಅಕಾಡೆಮಿಯಲ್ಲಿ ಇಂದು 150ಕ್ಕೂ ಹೆಚ್ಚು ಮಕ್ಕಳು ನೃತ್ಯ ಕಲಿಯುತ್ತಿರುವುದು ಗಮನಾರ್ಹ. ಮಕ್ಕಳಿಗೆ ಶಿಕ್ಷಣದ ಜತೆಗೆ ಸಂಸ್ಕಾರ ನೀಡಬೇಕು ಎಂದರು.

ಮುಳಗುಂದದ ವೈದ್ಯ ಡಾ. ಎಸ್.ಸಿ. ಚವಡಿ ಮಾತನಾಡಿ, ಕಲೆ ಮತ್ತು ಸಂಸ್ಕೃತಿ ಉಳಿಸುವ ಜವಾಬ್ದಾರಿ ಮಕ್ಕಳ ಮೇಲಿದೆ. ಜಿಲ್ಲೆಯ ವಿವಿಧೆಡೆ ಶಾಖೆಗಳನ್ನು ತೆರೆದು ಮಕ್ಕಳಿಗೆ ನೃತ್ಯ ತರಬೇತಿ ನೀಡುತ್ತಿರುವುದು ಶ್ಲಾಘನೀಯ ಎಂದರು.

ವಿಬಿಐ ನ್ಯೂಸ್ ಸಂಪಾದಕ ವೆಂಕಟೇಶ ಇಮರಾಪುರ ಮಾತನಾಡಿ, ವಿದುಷಿ ರಾಘವಿ ಜ್ಯೋತಿಶ್ರೀ ಅವರು ಹತ್ತು ವರ್ಷಗಳ ಹಿಂದೆ ಒಬ್ಬ ವಿದ್ಯಾರ್ಥಿಯಿಂದ ಆರಂಭಿಸಿದ ಅಕಾಡೆಮಿ ಇಂದು ಗದಗ, ಮುಂಡರಗಿ, ಅಣ್ಣಿಗೇರಿ ಹಾಗೂ ಗಜೇಂದ್ರಗಡ ತಾಲೂಕುಗಳಲ್ಲಿ ಏಳು ಶಾಖೆಗಳನ್ನು ಹೊಂದಿದೆ ಎಂದು ಹೇಳಿದರು.

ಕಾರ್ಯಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಸೇರಿದಂತೆ ಗಣ್ಯರು ಮಾತನಾಡಿದರು. ಅಕಾಡೆಮಿ ನಿರ್ದೇಶಕಿ ವಿದುಷಿ ರಾಘವಿ ಜ್ಯೋತಿಶ್ರೀ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕಿ ನಾಗರತ್ನಾ ಕುಂಬಾರ ನಿರೂಪಿಸಿದರು. ಬಳಿಕ ಮಕ್ಕಳಿಂದ ನೃತ್ಯ ಪ್ರದರ್ಶನ ನಡೆಯಿತು.

### ವಚನ ಪಿತಾಮಹರ ಸಾಹಿತ್ಯ ಸೇವೆ ಸ್ಮರಣೆ

# ವಚನಗಳ ಬೆಳಕಿಗೆ ಹಳಕಟ್ಟಿ ಕೊಡುಗೆ ಅಪಾರ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**




ಶತಮಾನಗಳ ಹಿಂದೆ ರಚನೆಯಾದ ಶರಣರ ಅಮೂಲ್ಯ ವಚನಗಳು ಕಾಲಗರ್ಭದಲ್ಲಿ ಕಳೆದುಹೋಗುವ ಸ್ಥಿತಿಯಲ್ಲಿದ್ದಾಗ ಅವುಗಳನ್ನು ಹುಡುಕಿ, ಸಂಗ್ರಹಿಸಿ, ಸಂರಕ್ಷಿಸಿ ಸಮಾಜಕ್ಕೆ ಪರಿಚಯಿಸಿದ ಡಾ. ಫ.ಗು. ಹಳಕಟ್ಟಿಯವರ ಸಾಹಿತ್ಯ ಸೇವೆ ಅಪೂರ್ವ. ಅವರ ಪರಿಶ್ರಮದಿಂದಲೇ ವಚನ ಸಾಹಿತ್ಯದ ಬಹುದೊಡ್ಡ ಸಂಪತ್ತು ಇಂದಿನ ಪೀಳಿಗೆಗೆ ದೊರೆತಿದೆ ಎಂದು ಸಾಹಿತಿ ಹಾಗೂ ಶರಣ ಸಾಹಿತ್ಯ ಪರಿಷತ್ ಗದಗ ಜಿಲ್ಲಾಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಪಟ್ಟಣದಲ್ಲಿ ಶುಕ್ರವಾರ ಆಯೋಜಿಸಿದ್ದ 'ವಚನ ಪಿತಾಮಹ ಫ.ಗು. ಹಳಕಟ್ಟಿ' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ಬಸವಣ್ಣ, ಅಕ್ಕಮಹಾದೇವಿ, ಅಲ್ಲಮಪ್ರಭು ಸೇರಿದಂತೆ ಅನೇಕ ಶರಣರು ತಮ್ಮ ಅನುಭವ, ವಿಚಾರ ಹಾಗೂ ಸಾಮಾಜಿಕ ಸಂದೇಶಗಳನ್ನು ವಚನಗಳ ಮೂಲಕ ದಾಖಲಿಸಿದ್ದರು.

ಕಾಲಕ್ರಮೇಣ ಅವು ಮಠಗಳ ಕತ್ತಲೆ ಕೋಣೆಗಳು, ಮನೆಗಳ ಮೂಲೆಗಳು ಹಾಗೂ ತಾಳೆಗರಿಗಳಲ್ಲಿ ಚದುರಿಹೋಗಿದ್ದವು. ಇಂತಹ ಸಂದರ್ಭದಲ್ಲಿ ವಚನಗಳ ಮಹತ್ವ ಅರಿತು ಗ್ರಾಮದಿಂದ ಗ್ರಾಮಕ್ಕೆ ತೆರಳಿ ಅವುಗಳನ್ನು ಹುಡುಕಿ ಸಂಗ್ರಹಿಸಿದ ಹಳಕಟ್ಟಿಯವರು ಕನ್ನಡ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದರು.

> ವಚನಗಳಲ್ಲಿರುವ ಮಾನವೀಯ ಮೌಲ್ಯಗಳನ್ನು ಯುವಜನತೆ ಅರಿತು ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಹಳಕಟ್ಟಿಯವರ ಅಪಾರ ಪರಿಶ್ರಮಕ್ಕೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ.
> – ಕೆ.ಎ. ಬಳಿಗೇರ, ಸಾಹಿತಿ

ವಚನಗಳು ಧಾರ್ಮಿಕ ವಿಚಾರಗಳಿಗೆ ಸೀಮಿತವಾಗದೆ ಸಮಾನತೆ, ಕಾಯಕ, ದಾಸೋಹ, ಮಾನವೀಯತೆ, ಸಾಮಾಜಿಕ ನ್ಯಾಯ ಹಾಗೂ ವೈಚಾರಿಕತೆಯ ಸಂದೇಶಗಳನ್ನು ಸಾರುತ್ತವೆ. ಶರಣರ ವಿಚಾರಧಾರೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕೆಂಬ ಆಶಯದಿಂದ ಹಳಕಟ್ಟಿಯವರು ಶ್ರಮಿಸಿದ್ದರು. ಅವರ ಕಾರ್ಯ ಕನ್ನಡದ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿದ ಮಹತ್ವದ ಚಳವಳಿಯಾಗಿದೆ ಎಂದು ಹೇಳಿದರು.

ಇಂದಿನ ತಂತ್ರಜ್ಞಾನಾಧಾರಿತ ವೇಗದ ಬದುಕಿನಲ್ಲಿ ವಚನ ಸಾಹಿತ್ಯದ ಓದು ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಯುವಕರು ಶರಣರ ಚಿಂತನೆಗಳನ್ನು ಅರಿತು, ಅವುಗಳ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಚಂದ್ರಣ್ಣ ನೂರಶೆಟ್ಟರ ಮಾತನಾಡಿ, ಹಳಕಟ್ಟಿಯವರಂತಹ ಮಹನೀಯರ ಸಾಹಿತ್ಯ ಸೇವೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು. ವಚನ ಸಾಹಿತ್ಯದ ಅಧ್ಯಯನ ಮತ್ತು ಪ್ರಸಾರಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಎಸ್.ಎಸ್. ನಾಗಲೋಟಿ, ಎಂ.ಪಿ. ಹುಬ್ಬಳ್ಳಿ, ಸುನೀಲ ಬುರಬುರೆ, ಎಲ್.ಎಸ್. ಅರಳಹಳ್ಳಿ, ಜಿ.ಎಸ್. ರಾಮಶೆಟ್ಟರ, ಲಲಿತಾ ಕೆರಿಮನಿ, ಅನ್ನಪೂರ್ಣ ಓದುನವರ, ಅಶ್ವಿನಿ ಅಂಕಲಕೋಟಿ, ನಿರ್ಮಲಾ ಅರಳಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು. ಬಸವರಾಜ ಸಂಗಪ್ಪಶೆಟ್ಟರ ನಿರೂಪಿಸಿದರು. ಎಂ.ವೈ. ಬಸಾಪೂರ ಪ್ರಾರ್ಥಿಸಿದರು. ಎಂ.ಕೆ. ಕಳ್ಳಿಮಠ ಸ್ವಾಗತಿಸಿದರು. ವೆಂಕಟೇಶ ಮಾತಾಡೆ ವಂದಿಸಿದರು.

# ಮೂಲ ಜನಪದ ಕಲೆ ಉಳಿಸಲು ಯುವಜನತೆ ಮುಂದಾಗಲಿ



**ವಿಜಯಸಾಕ್ಷಿ ಸುದ್ದಿ, ಗದಗ**

ವೈಜ್ಞಾನಿಕ ಯುಗದಲ್ಲಿ ಪಾಶ್ಚಿಮಾತ್ಯ ಕಲೆಗಳಿಗೆ ಆದ್ಯತೆ ನೀಡುತ್ತಿರುವ ಪರಿಣಾಮ ನಮ್ಮ ನಾಡಿನ ಹಳ್ಳಿ ಸೊಗಡಿನ ಮೂಲ ಜನಪದ ಕಲೆಗಳು ನಶಿಸುತ್ತಿವೆ. ಇಂತಹ ಕಲೆಗಳನ್ನು ಯುವಜನತೆ ಹಾಗೂ ಮುಂದಿನ ಪೀಳಿಗೆಗೆ ಪರಿಚಯಿಸಿ, ಅಳವಡಿಸಿಕೊಳ್ಳುವ ಜತೆಗೆ ಜಾನಪದ ಕಲಾವಿದರು ಮತ್ತು ಕಲಾ ತಂಡಗಳಿಗೆ ಪ್ರೋತ್ಸಾಹ ನೀಡಬೇಕು ಎಂದು ಅಸುಂಡಿ ಗ್ರಾಮದ ಯುವ ಮುಖಂಡ ಮಂಜುನಾಥ ಗುಡದೂರ ಕರೆ ನೀಡಿದರು.

ಅಸುಂಡಿ ಗ್ರಾಮದ ಶ್ರೀ ಬಸವಣ್ಣ ದೇವರ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಬಸವೇಶ್ವರ ಟ್ರಸ್ಟ್ ಕಮಿಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರ ಸಹಯೋಗದಲ್ಲಿ ಆಯೋಜಿಸಿದ್ದ ಜಾನಪದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶ್ರೀ ಸಿದ್ಧಲಿಂಗೇಶ್ವರ ಜನಪದ ಕಲಾ ತಂಡ, ಅಡವಿಸೋಮಾಪುರದ ಮಹಾಂತೇಶ ದಿಂಡೇನವರ ಹಾಗೂ ಸಂಗಡಿಗರು ದೀಪ ನೃತ್ಯ, ಸುಗ್ಗಿ ಕುಣಿತ, ಜೋಗತಿ ನೃತ್ಯ ಸೇರಿದಂತೆ ವಿವಿಧ ಜನಪದ ಕಲಾ ಪ್ರದರ್ಶನ ನೀಡಿದರು.

> ನಮ್ಮ ಜನಪದ ಕಲೆಗಳು ಕೇವಲ ಮನರಂಜನೆಯ ಸಾಧನವಲ್ಲ. ಅವು ನಮ್ಮ ಮಣ್ಣಿನ ಸಂಸ್ಕೃತಿ, ಬದುಕು ಮತ್ತು ಪರಂಪರೆಯ ಪ್ರತೀಕ. ಯುವಜನತೆ ಇವುಗಳನ್ನು ಉಳಿಸುವ ಹೊಣೆ ಹೊತ್ತುಕೊಳ್ಳಬೇಕು.
> – ಮಂಜುನಾಥ ಗುಡದೂರ, ಯುವ ಮುಖಂಡ

ಮುಖ್ಯ ಅತಿಥಿ ರಾಘುನಾಥರಡ್ಡಿ ಹುಲಕೋಟಿ ಮಾತನಾಡಿ, ಹಿರಿಯರು ಉಳಿಸಿಕೊಂಡು ಬಂದ ಡೊಳ್ಳಿನ ಪದ, ಹಂತಿಪದ, ಬೀಸುಕಲ್ಲಿನ ಪದ, ಸೋಬಾನೆ ಪದ, ಜೋಗುಳ ಪದ, ಲಾವಣಿ, ಗೀಗೀ ಪದಗಳು ಕಣ್ಮರೆಯಾಗುತ್ತಿರುವುದು ವಿಷಾದನೀಯ. ಇವುಗಳನ್ನು ಉಳಿಸಿ ಬೆಳೆಸಲು ಯುವಜನತೆ ಮುಂದಾಗಬೇಕು ಎಂದರು. ಬಸವೇಶ್ವರ ಟ್ರಸ್ಟ್ ಕಮಿಟಿ ಅಧ್ಯಕ್ಷ ಚನ್ನಪ್ಪ ಬನಪ್ಪನವರ ಅಧ್ಯಕ್ಷತೆ ವಹಿಸಿದ್ದರು. ಗ್ರಾಮದ ಗುರು-ಹಿರಿಯರು ಉಪಸ್ಥಿತರಿದ್ದರು. ಜನಪದ ಕಲಾವಿದ ವೀರಣ್ಣ ಚನ್ನಪ್ಪ ಅಂಗಡಿ ಸ್ವಾಗತಿಸಿದರು. ಅಶೋಕ ಬಶೆಟ್ಟಿ ನಿರೂಪಿಸಿದರು. ಮೇಟಿ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka